ಸಂಪುಟ : 10 ಸಂಚಿಕೆ: 54 ಪುಟ : 4+2 ಬೆಲೆ: 3.00 ಶುಕ್ರವಾರ ಮಾರ್ಚ್ 28 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 54 Pages : 4+2 Price : 3.00 Friday March 28 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಮಾರ್ಚ್ 28 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಕಾರ್ಯಕ್ರಮದ ವಿವರ ಇಂತಿದೆ.

ಮಾರ್ಚ್ 28 ರಂದು ಹುಬ್ಬಳ್ಳಿಯಿಂದ ಬೆಳಿಗ್ಗೆ 6.30 ಗಂಟೆಗೆ ರಸ್ತೆ ಮೂಲಕ ಹೊರಟು ಬೆಳಿಗ್ಗೆ 7.30 ಗಂಟೆಗೆ ಗದುಗಿಗೆ ಆಗಮಿಸುವರು. ಬೆಳಿಗ್ಗೆ 11 ಗಂಟೆಗೆ ಗ್ರಾಮೀಣ ನಾಯಕರ ಜೊತೆ ಚರ್ಚೆ ನಡೆಸುವರು. ಸಂಜೆ 6 ಗಂಟೆಗೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಇಫ್ತಿಯಾರ್ ಕೂಟದಲ್ಲಿ ಭಾಗವಹಿಸುವರು ಮತ್ತು ಗದಗನಲ್ಲಿ ವಾಸ್ತವ್ಯ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ರಾಜ್ಯದ ಜನತೆಗೆ ಮತ್ತೊಂದು ಶಾಕ್: ಬಸ್, ಮೆಟ್ರೋ ದರ ಏರಿಕೆ ಬಳಿಕ ನಂದಿನಿ ಹಾಲಿನ ದರ ಏರಿಕೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದ ಹೆಮ್ಮೆಯ ನಂದಿನಿ ಹಾಲಿನ ದರ ಹೆಚ್ಚಿಸಿ ವರ್ಷ ಕಳೆದೇ ಇಲ್ಲ. ಆಗಲೇ ದರ ಏರಿಕೆಗೆ ಪ್ರಸ್ತಾಪ ಬಂದಿತ್ತು. ಕೆಎಂಎಫ್ ಅಧಿಕಾರಿಗಳ ಜೊತೆ ಸಭೆ ನಡೆಸಿದ ಸಿಎಂ ಸಿದ್ದರಾಮಯ್ಯ ಹಾಲಿ ದರ ಹೆಚ್ಚಳಕ್ಕೆ ಒಪ್ಪಿಗೆ ಸೂಚಿಸರಿಲಿಲ್ಲ. ಆದ್ರೆ, ಇದೀಗ ನಂದಿನ ಹಾಲಿನ ದರ ಏರಿಕೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ.

ಹೌದು ಪ್ರತಿ ಲೀಟರ್ ನಂದಿನಿ ಹಾಲಿನ ದರ 4 ರೂ. ಹೆಚ್ಚಳ ಮಾಡಲು ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ಸೂಚಿಸಿದೆ. ಶುಕ್ರವಾರ ಬೆಳಿಗ್ಗೆಯಿಂದಲೇ ಪರಿಷ್ಕೃತ ದರ ಜಾರಿಯಾಗಲಿದೆ.

ಯಾವ ಹಾಲಿನ ದರ ಎಷ್ಟಾಗಬಹುದು?

- ನೀಲಿ ಪ್ಯಾಕೆಟ್ ಹಾಲು 44 ರೂ ನಿಂದ 48 ರೂ
- ಆರೆಂಜ್ ಪ್ಯಾಕೆಟ್ ಹಾಲು 54 ರೂ. ನಿಂದ 58 ರೂ.
- ಸಮೃದ್ಧಿ ಹಾಲಿನ ಪ್ಯಾಕೆಟ್ 56 ರೂ. ನಿಂದ 60 ರೂ.
- ಗ್ರೀನ್ ಸ್ಪೇಷಲ್ 54 ರೂ. ನಿಂದ 58 ರೂ.
- ನಾರ್ಮಲ್ ಗ್ರೀನ್ 52 ರೂ. ನಿಂದ 56 ರೂ.

6–8 ರೂ. ಹಾಲಿನ ದರ ಹೆಚ್ಚಳಕ್ಕೆ ಒಕ್ಕೂಟಗಳು ಪ್ರಸ್ತಾಪಿಸಿದ್ದವು. ಆದರೆ ಸೋಮವಾರ ನಡೆದ ಸಭೆಯಲ್ಲಿ ಸಿಎಂ ಈ ದರಕ್ಕೆ ಒಪ್ಪಿಗೆ ಸೂಚಿಸಿರಲಿಲ್ಲ. ಹಾಲಿನ ದರ ಹೆಚ್ಚಳ ಹಣ ಕೇವಲ ರೈತರಿಗಷ್ಟೇ ಇರಲಿ ಎಂದಿದ್ದರು. ಆದರೆ ಸಭೆಯ ಬಳಿಕ 5 ರೂ. ಯಾದರೂ ಹೆಚ್ಚಳ ಮಾಡಿ, ಅದರಲ್ಲಿ 3 ರೂ. ರೈತರಿಗೆ, 2 ರೂ. ಒಕ್ಕೂಟಗಳಿಗೆ ಇರಲಿ ಎಂದು ಪ್ರಸ್ತಾಪಿಸಿದ್ದರು. ಆದ್ರೆ ಗುರುವಾರ ನಡೆದ ಕ್ಯಾಬಿನೆಟ್ ಸಭೆಯಲ್ಲಿ 4 ರೂ. ಹೆಚ್ಚಳಕ್ಕೆ ಸಂಪುಟ ಒಪ್ಪಿಗೆ ಸೂಚಿಸಿದೆ.

### ಜಿಲ್ಲಾ ಮಟ್ಟದ ದೈಹಿಕ ಶಿಕ್ಷಣ ಶಿಕ್ಷಕರ, ಅಧಿಕಾರಿಗಳ ಕ್ರೀಡಾಕೂಟ ಉದ್ಘಾಟಿಸಿದ ವಿ.ಪ ಸದಸ್ಯ ಎಸ್.ವಿ. ಸಂಕನೂರ

# ದೈಹಿಕ ಶಿಕ್ಷಣ ಶಿಕ್ಷಕರ ಕೊರತೆ ನೀಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆಗಳು ನಮ್ಮ ಮಾನಸಿಕ, ದೈಹಿಕ ಬೆಳವಣಿಗೆಗೆ ಸಹಕಾರಿಯಾಗಲಿದೆ. ಕ್ರೀಡೆಯಿಂದ ಶಿಸ್ತು, ಸಮಯ ಪ್ರಜ್ಞೆ, ಕ್ರೀಡಾ ಮನೋಭಾವ, ಪ್ರಾಮಾಣಿಕತೆ ಇವೆಲ್ಲವನ್ನೂ ರೂಢಿಸಿಕೊಂಡಾಗ ಮಾತ್ರ ವಿದ್ಯಾರ್ಥಿಗಳ ಪಾಲಿಗೆ ಉತ್ತಮ ಶಿಕ್ಷಕರಾಗಲು ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ಅಭಿಪ್ರಾಯಪಟ್ಟರು.

ಅವರು ಗದಗ ನಗರದ ದಿ. ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಉಪ ನಿರ್ದೇಶಕರ ಕಾರ್ಯಾಲಯ, ಶಾಲಾ ಶಿಕ್ಷಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಗುರುವಾರ ಆಯೋಜಿಸಿದ್ದ 2024–25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದೈಹಿಕ ಶಿಕ್ಷಣ ಶಿಕ್ಷಕರ ಮತ್ತು ಅಧಿಕಾರಿಗಳ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಶಾಲಾ–ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಕೊರತೆಯಿಂದ ಕ್ರೀಡಾಪಟುಗಳು ಕ್ರೀಡೆಯಲ್ಲಿ ಹಿಂದುಳಿಯಲು ಕಾರಣವಾಗಿದೆ. ತಕ್ಷಣ ಸರ್ಕಾರ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಬೇಕೆಂದು ಎಸ್.ವಿ. ಸಂಕನೂರ ಒತ್ತಾಯಿಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಕ್ರೀಡಾ ಧ್ವಜಾರೋಹಣ ನೆರವೇರಿಸಿದ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಮಾತನಾಡಿ, ದೈಹಿಕ ಶಿಕ್ಷಕರಿಗೆ ಇದೇ ಮೊದಲ ಬಾರಿಗೆ ಕ್ರೀಡಾಕೂಟ ಆಯೋಜನೆ



ಮಾಡಿದೆ. ನಿತ್ಯದ ಒತ್ತಡದ ಬದುಕಿಗೆ ಕ್ರೀಡೆ ಸಹಕಾರಿ. ದೈಹಿಕ ಶಿಕ್ಷಣ ಶಿಕ್ಷಕರು ಕ್ರೀಡೆಗಳಲ್ಲಿ ಭಾಗವಹಿಸುವದು ಮುಖ್ಯವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಡೈಟ್ ಪ್ರಾಚಾರ್ಯ ಜಿ.ಎಲ್. ಬಾರಟಕ್ಕೆ, ಗ್ರಾಮೀಣ ಬಿಇಓ ವ್ಹಿ.ವ್ಹಿ. ನಡುವಿನಮನಿ, ಕ.ರಾ.ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ವ್ಹಿ.ಎಮ್. ಹಿರೇಮಠ, ಕ.ರಾ.ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಬಿ.ಎಫ್. ಪೂಜಾರ, ಡಿ. ದೇವರಾಜ್ ಅರಸು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕಾಧಿಕಾರಿ ಬಸವರಾಜ ಬಳ್ಳಾರಿ, ರವಿರಾಜ ಪವಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯ ನಿರ್ದೇಶಕ ಶರಣು ಗೋಗೇರಿ, ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಎಂ.ಎಂ. ಹವಳದ, ನಿವೃತ್ತ ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಎಂ.ಎಂ. ಕಲಹಾಳ, ತಾಲೂಕಿನ ದೈಹಿಕ ಶಿಕ್ಷಣ ಅಧಿಕಾರಿಗಳು, ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಪ್ರಾಸ್ತಾವಿಕ ಮಾತನಾಡಿ ಸ್ವಾಗತಿಸಿದರು. ಎಂ.ಎಸ್. ಕುಚಬಾಳ ನಿರೂಪಿಸಿದರು. ಪಿ.ಕೆ. ಅವರಡ್ಡಿ ವಂದಿಸಿದರು.

ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ರವಿ ಎಲ್.ಗುಂಜಿಕರ್ ಮಾತನಾಡಿ, ನಮ್ಮ ವೃತ್ತಿ ಜೀವನದಲ್ಲಿ ಒತ್ತಡದ ಬದುಕಿಗೆ ಕ್ರೀಡೆ ಸಹಕಾರಿಯಾಗಿದೆ. ಇದೇ ಮೊದಲ ಬಾರಿಗೆ ದೈಹಿಕ ಶಿಕ್ಷಣ ಶಿಕ್ಷಕರಿಗೆ ಕ್ರೀಡಾಕೂಟ ಆಯೋಜನೆ ಮಾಡಲಾಗಿದೆ. ಈ ಹಿಂದೆ ಸರಕಾರಿ ನೌಕರರ ಕ್ರೀಡಾಕೂಟದಲ್ಲಿ ಭಾಗವಹಿಸಲು ಕೆಲವರು ಆಕ್ಷೇಪ ವ್ಯಕ್ತಪಡಿಸಿದ್ದರು. ಕೊನೆಗೂ ಜಿಲ್ಲಾಧಿಕಾರಿಗಳ ಸಹಕಾರದಿಂದ ಅವರ ಆಸೆ ಕೈಗೂಡಿದ್ದು ಸಂತಸ ತಂದಿದೆ ಎಂದರು.



### ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರೈತ ಸೇನೆಯ ಶಿವಲಿಂಗಪ್ಪ ಹೂಗಾರ ಆಗ್ರಹ

# ಎಂಎಸ್‌ಪಿ ಜಾರಿಗೆ ಕೇಂದ್ರ ಸರ್ಕಾರ ಕ್ರಮವಹಿಸಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ರೈತರು ಬೆಳೆಯುವ ಎಲ್ಲ ಉತ್ಪನ್ನಗಳಿಗೆ ಕೇಂದ್ರ ಸರ್ಕಾರ ಬೆಂಬಲ ಬೆಲೆ ನಿಗದಿ ಮಾಡಬೇಕು ಎಂದು ಕರ್ನಾಟಕ ರೈತ ಸೇನೆಯ ರೋಣ ತಾಲೂಕು ಘಟಕದ ಉಪಾಧ್ಯಕ್ಷ ಶಿವಲಿಂಗಪ್ಪ ಹೂಗಾರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರ ಬೆಳೆಗಳಿಗೆ ಸೂಕ್ತ ಬೆಲೆ ಕಲ್ಪಿಸುವುದು ಕೇಂದ್ರ ಸರ್ಕಾರದ ಜವಾಬ್ದಾರಿಯೂ ಹೌದು. ಎಂ.ಎಸ್. ಸ್ವಾಮಿನಾಥನ್ ಆಯೋಗವು ಕೃಷಿ ವ್ಯವಸ್ಥೆಯನ್ನು ಸುಧಾರಿಸಲು ಕೆಲವೊಂದು ಶಿಫಾರಸು ಮಾಡಿದ್ದು, ಅದನ್ನು ಕಾಂಗ್ರೆಸ್ ಸರ್ಕಾರ ಜಾರಿ ಮಾಡಲಿಲ್ಲ. ಕಾಂಗ್ರೆಸ್ ಮಾಡದ ಅಭಿವೃದ್ಧಿ ಕೆಲಸಗಳನ್ನು ಬಿಜೆಪಿ ಮಾಡುತ್ತದೆ ಎಂಬ ಕಾರಣಕ್ಕೆ ದೇಶದ ಜನರು ಕೇಂದ್ರದಲ್ಲಿ ಬಿಜೆಪಿಗೆ ಅಧಿಕಾರ ಕೊಟ್ಟಿದ್ದಾರೆ. ಕೇಂದ್ರ ಸರ್ಕಾರ ಎಂಎಸ್‌ಪಿ ಜಾರಿಗೆ ಕ್ರಮವಹಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಯೊಂದು ವಸ್ತುವಿಗೂ ಎಂಆರ್‌ಪಿ ನಿಗದಿಯಾಗಿರುತ್ತದೆ. ಆದರೆ, ರೈತರ




ಉತ್ಪನ್ನಗಳಿಗೆ ಯಾಕಿಲ್ಲ? ರಾಜ್ಯದಿಂದ ಸಂಸತ್ ಆಯ್ಕೆಯಾಗಿರುವ ಯಾವೊಬ್ಬ ಸಂಸದ ಕೂಡ ರೈತರ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ದೊರಕಿಸಿಕೊಡುವ ಬಗ್ಗೆ ಧ್ವನಿ ಎತ್ತುತ್ತಿಲ್ಲ. ಮಹದಾಯಿ ವಿಚಾರದಲ್ಲೂ ಕೇಂದ್ರ ಸರ್ಕಾರ ರೈತರಿಗೆ ಮೋಸ ಮಾಡುತ್ತಿದೆ. ಬೊಮ್ಮಾಯಿ ಅವರು ಕಳಸಾ–ಬಂಡೂರಿ ಹೆಸರು ಹೇಳಿಕೊಂಡು ಸಚಿವ, ಸಿಎಂ, ಸಂಸದರಾದರೇ ಹೊರತು ಯೋಜನೆ ಅನುಷ್ಠಾನಕ್ಕೆ ಶ್ರಮಿಸಲಿಲ್ಲ ಎಂದು ದೂರಿದರು.

ಕಾಂಗ್ರೆಸ್ ನಾಯಕರು ಈಗಲಾದರೂ ರೈತರ ಸಮಸ್ಯೆಗಳ ಬಗ್ಗೆ ಗಮನಹರಿಸಿ, ಸಂಸತ್‌ನಲ್ಲಿ ಧ್ವನಿ ಎತ್ತಬೇಕು. ಬೆಳೆವಿಮೆ ಖಾಸಗಿ ಕಂಪನಿಯವರಿಗೆ ಕೊಡುವ ಬದಲು ಸರ್ಕಾರಿ ಸ್ವಾಮ್ಯದ ಕಂಪನಿಗೆ ಕೊಡಬೇಕು ಎಂದು ಆಗ್ರಹಿಸಿದರು. ರಿ3ಪ್ರಧಾನಿ ನರೇಂದ್ರ ಮೋದಿ ಅವರು ರೈತರ ಬೆಳೆಯುವ ಎಲ್ಲ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಬೇಕು. ರೈತರ ಕೂಗು ಕೇಳಿಸಿಕೊಳ್ಳದಿದ್ದರೆ ಉಗ್ರ ಹೋರಾಟ ಆರಂಭಿಸಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ರೈತ ಮುಖಂಡರಾದ ಮಂಜುನಾಥ ಮಾಳವಾಡ, ರಮೇಶ ಚಲವಾದಿ, ಪಿಂಜಾರ, ಮಲ್ಲಪ್ಪ ಇದ್ದರು.

ಮೋದಿ ಸರ್ಕಾರ 20 ಕೋಟಿ ಉದ್ಯೋಗ ಸೃಷ್ಟಿಸಿದ್ದರೆ ರೈತರು, ಮಧ್ಯಮ ವರ್ಗದವರು ಮೈಕ್ರೋ ಫೈನಾನ್ಸ್‌ಗಳಲ್ಲಿ ಸಾಲ ಮಾಡಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರಲಿಲ್ಲ. ಬಿಜೆಪಿಯವರು 14 ಮುಡಾ ಸೈಟ್ ವಿಚಾರವಾಗಿ ಪಾದಯಾತ್ರೆ ಮಾಡಿದರು. ಆದರೆ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಭೂಮಿ ಒತ್ತುವರಿ ಮಾಡಿದ್ದು ಅವರ ಕಣ್ಣಿಗೆ ಕಾಣಿಸುತ್ತಿಲ್ಲವೇ ಎಂದು ಬಿಜೆಪಿ ನಾಯಕರ ವಿರುದ್ಧ ಹರಿಹಾಯ್ದರು.

### ಗದಗ ಮೆಡಿಕಲ್ ಕಾಲೇಜು ಇನ್ನುಮುಂದೆ

# 'ಕೆ.ಎಚ್ ಪಾಟೀಲ ಮೆಡಿಕಲ್ ಕಾಲೇಜು'

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ವೈದ್ಯಕೀಯ ವಿಜ್ಞಾನ ಮಹಾವಿದ್ಯಾಲಯಕ್ಕೆ ಸಹಕಾರಿ ರಂಗದ ಭೀಷ್ಮರೆಂದೇ ಹೆಸರಾಗಿರುವ ಕೆ.ಎಚ್. ಪಾಟೀಲರ ಹೆಸರನ್ನಿಡಲು ಸಚಿವ ಸಂಪುಟ ನಿರ್ಧರಿಸಿದೆ. ಗುರುವಾರ ಬೆಂಗಳೂರಿನಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡ ನಿರ್ಧಾರದ ಕುರಿತು ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ ಮಾಹಿತಿ ನೀಡಿದ್ದು, ಸಹಕಾರಿ ರಂಗದಲ್ಲಿ ಅನುಪಮ ಸೇವೆ ಸಲ್ಲಿಸಿದ ಕೆ.ಎಚ್. ಪಾಟೀಲರು ಸಚಿವರಾಗಿ, ಶಾಸಕರಾಗಿ ಜನೋಪಯೋಗಿ ಕಾರ್ಯಗಳನ್ನು ಕೈಗೊಂಡು ಜನಮಾನಸದಲ್ಲಿ ಅಜರಾಮರರಾಗಿದ್ದಾರೆ. ಇಂತಹ ಮಹಾನ್ ನಾಯಕನ ಹೆಸರನ್ನು ಸಾರ್ವಜನಿಕ ಸೇವೆ ಮಾಡುತ್ತಿರುವ ಗದಗ ಮೆಡಿಕಲ್



ಕಾಲೇಜಿಗೆ ನಾಮಕರಣ ಮಾಡುವ ಮೂಲಕ ಅವರ ಸೇವೆಯನ್ನು ಗೌರವಿಸುವ, ಶಾಶ್ವತವಾಗಿಸುವ ಕ್ರಮಕ್ಕೆ ಸರ್ಕಾರ ಮುಂದಾಗಿದೆ ಎಂದು ತಿಳಿಸಿದರು.

ಇದೇ ಮಾರ್ಚ್ 16ರಂದು ಗದಗದಲ್ಲಿ ಮಾಜಿ ಸಚಿವ ಕೆ.ಎಚ್. ಪಾಟೀಲ ಜನ್ಮಶತಮಾನೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು. ಕಾರ್ಯಕ್ರಮದಲ್ಲಿ ಭಾಗಿಯಾಗಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂದೇಶ ನೀಡಿ, ಕೆ.ಎಚ್. ಪಾಟೀಲರು ನಾಡು–ನುಡಿಗೆ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ, ಗದಗ ವೈದ್ಯಕೀಯ ವಿಜ್ಞಾನ ಮಹಾವಿದ್ಯಾಲಯಕ್ಕೆ ಕೆ.ಎಚ್. ಪಾಟೀಲರ ಹೆಸರಿಡಲಾಗುವುದು ಎಂದು ಭರವಸೆ ನೀಡಿದ್ದರು.

ಅದರಂತೆ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಅಧಿಕೃತವಾಗಿ ನಿರ್ಧಾರವನ್ನು ಪ್ರಕಟಿಸಿದ್ದು, ಕೆ.ಎಚ್. ಪಾಟೀಲರ ಅಭಿಮಾನಿಗಳಲ್ಲಿ ಸಂತಸ ಮೂಡಿಸಿದೆ.

### ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್ ಸೂಚನೆ

# ಕಾಯ್ದೆ ಉಲ್ಲಂಘಿಸುವವರ ಅಂಗಡಿ ಪರವಾನಿಗೆ ರದ್ದುಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕೋಟ್ಪಾ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕು. ಕೋಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ ಅಂತಹ ಅಂಗಡಿಗಳ ಪರವಾನಿಗೆಯನ್ನು ರದ್ದುಗೊಳಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಕೋಟ್ಪಾ ಕಾಯ್ದೆ ಉಲ್ಲಂಘನೆ ಪುನರಾವರ್ತನೆ ಮಾಡಿದಲ್ಲಿ ಅಂತವರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಲಾಗುವುದು. ಅಂತಹ ಅಂಗಡಿಗಳ ವ್ಯಾಪಾರ ಪರವಾನಿಗೆ ರದ್ದುಗೊಳಿಸಬೇಕು. ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್ ಸೇರಿದಂತೆ ಇತರ ಸ್ಥಳೀಯ ಸಂಸ್ಥೆಗಳಡಿಯಲ್ಲಿ ಎಲ್ಲ ತಂಬಾಕು ಮಾರಾಟ ಮಾಡುವ



ಅಂಗಡಿಕಾರರು ಕಡ್ಡಾಯವಾಗಿ ಪ್ರತ್ಯೇಕ ತಂಬಾಕು ಮಾರಾಟ ಪರವಾನಿಗೆ ಪಡೆದುಕೊಳ್ಳಬೇಕು. ಎಲ್ಲಾ ಅಂಗಡಿ ಮುಂಗಟ್ಟುಗಳ ಮುಂದೆ ಧೂಮಪಾನ ನಿಷೇಧ ಹಾಗೂ 18 ವರ್ಷದೊಳಗಿನವರಿಗೆ ತಂಬಾಕು ನಿಷೇಧದ ಕುರಿತ ನಾಮಫಲಕ ಬಿತ್ತರಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಎನ್.ಟಿ.ಸಿ.ಪಿ ಕಾರ್ಯಕ್ರಮಾಧಿಕಾರಿ ಹಾಗೂ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಥೋಡ್ ಜಿಲ್ಲಾ ತಂಬಾಕು ನಿಯಂತ್ರಣ ಕೋಶದಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳ ಕುರಿತು ವಿವರಿಸುತ್ತಾ, ಜಿಲ್ಲೆಯಲ್ಲಿ ಕಳೆದ ವರ್ಷ ಒಟ್ಟು 149 ಶಾಲಾ/ಕಾಲೇಜುಗಳಲ್ಲಿ ತಂಬಾಕು ವ್ಯಸನದಿಂದಾಗುವ ದುಷ್ಪರಿಣಾಮ ಹಾಗೂ ಕೋಟ್ಪಾ ಕಾಯ್ದೆ ಕುರಿತು ಶಿಕ್ಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಆರೋಗ್ಯ ಅರಿವು ಕಾರ್ಯಕ್ರಮ ಹಮ್ಮಿಕೊಂಡು, ಶಾಲಾ/ಕಾಲೇಜುಗಳ ಮುಖ್ಯಸ್ಥರ ಅಧ್ಯಕ್ಷತೆಯಲ್ಲಿ ತಂಬಾಕು ನಿಯಂತ್ರಣ ಸಮಿತಿ ರಚನೆ ಮಾಡಲಾಗಿದೆ ಎಂದು ವಿವರಿಸಿದರು. ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡರ, ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿಗಳು, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘ–ಸಂಸ್ಥೆಗಳ ಮುಖ್ಯಸ್ಥರು, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

ಕೋಟ್ಪಾ ದಾಳಿ ಹಮ್ಮಿಕೊಳ್ಳುವುದರ ಮೂಲಕ ವ್ಯಾಪಾರಸ್ಥರು, ತಂಬಾಕು ಬಳಕೆದಾರರಿಗೆ ಹಾಗೂ ಸಾರ್ವಜನಿಕರಲ್ಲಿ ಕೋಟ್ಪಾ ಕಾಯ್ದೆ ಕುರಿತು ಜಾಗೃತಿ ಮೂಡಿಸಲಾಗಿದೆ ಹಾಗೂ ಕೋಟ್ಪಾ ಕಾಯ್ದೆ ಉಲ್ಲಂಘನೆ ವಿರುದ್ಧ ಕ್ರಮ ಕೈಗೊಂಡು ಈವರೆಗೆ 71 ಕೋಟ್ಪಾ ದಾಳಿ ನಡೆಸಿ 1055 ಪ್ರಕರಣಗಳನ್ನು ದಾಖಲಿಸಿ ರೂ.172350 ದಂಡ ಸಂಗ್ರಹಿಸಲಾಗಿದೆ. ಕೋಟ್ಪಾ ಅನುಷ್ಠಾನ ಕುರಿತು ವಿವಿಧ ಇಲಾಖೆಗಳ ಅಧಿಕಾರಿ–ಸಿಬ್ಬಂದಿಗಳಿಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ತಂಬಾಕು ವ್ಯಸನ ಮುಕ್ತ ಕೇಂದ್ರದ ಮೂಲಕ ಈ ವರ್ಷ ಒಟ್ಟು 4140 ಅರ್ಥಿಗಳಿಗೆ ಆಪ್ತ ಸಮಾಲೋಚನೆ ಮಾಡಲಾಗಿದೆ. ಸಮುದಾಯ ಮಟ್ಟದಲ್ಲಿ ಕೇಂದ್ರೀಕೃತ ಗುಂಪು ಚರ್ಚೆಯ ಮೂಲಕ ಒಟ್ಟು 78 ಎಫ್.ಜಿ.ಡಿ. ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಎಂದು ಡಾ. ವೆಂಕಟೇಶ ರಾಥೋಡ್ ಸಭೆಗೆ ತಿಳಿಸಿದರು.

## ಸಂಪಾದಕೀಯ

# ಯತ್ನಾಳ ಮತ್ತು ಪಂಚಮಸಾಲಿ ಸಮಾಜ

ಪಕ್ಷದ ಶಿಸ್ತು ಉಲ್ಲಂಘಿಸಿದ್ದಕ್ಕಾಗಿ ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರನ್ನು ಬಿಜೆಪಿ ಆರು ವರ್ಷಗಳ ಕಾಲ ಅಮಾನತುಗೊಳಿಸಿ ಆದೇಶ ಹೊರಡಿಸಿದೆ. ಬಿಜೆಪಿ ಶಿಸ್ತು ಸಮಿತಿಯ ಆದೇಶ ಹೊರಬೀಳುತ್ತಿದ್ದಂತೆ ಪಕ್ಷದಲ್ಲಿ ಭಾರೀ ಸಂಚಲನ ಉಂಟಾಗದಿದ್ದರೂ ಸಣ್ಣಮಟ್ಟದ ಕಂಪನವನ್ನು ಉಂಟುಮಾಡಿದೆ.

ಅದಕ್ಕೆ ಮುಖ್ಯ ಕಾರಣ, ಪ್ರಬಲ ಹಿಂದುತ್ವವಾದಿ ಎನ್ನುವುದು. ಲಂಗು ಲಗಾಮು ಇಲ್ಲದೇ ಒಂದು ನಿರ್ದಿಷ್ಟ ಸಮುದಾಯವನ್ನು ಗುರಿಯಾಗಿಸಿಕೊಂಡು ಮಾತನಾಡುತ್ತಿದ್ದ ಅವರ ಮಾತುಗಳು, ಕೆಲ ಕಾರ್ಯಕರ್ತರನ್ನು ಉತ್ತೇಜಿಸಿದ್ದಂತು ನಿಜ. ಇನ್ನು ಯತ್ನಾಳ, ಪಂಚಮಸಾಲಿ ಸಮಾಜಕ್ಕೆ ಸೇರಿದವರು ಎನ್ನುವ ಕಾರಣಕ್ಕೆ ಉತ್ತರ ಕರ್ನಾಟಕ ಭಾಗದಲ್ಲಿ ಯತ್ನಾಳ ಉಚ್ಚಾಟನೆ ಒಂದಷ್ಟು ಕವಿವಿಸಿ ತಂದೊಡ್ಡಿದೆ.

ಯತ್ನಾಳ ಉಚ್ಚಾಟನೆಗೆ ಒಳಗಾದರೂ ಅವರ ಪರವಾಗಿದ್ದ ಭಿನ್ನಮತೀಯ ನಾಯಕರು ಇನ್ನೂ ಅವರ ಜೊತೆಗೆ ಇರುವುದು, ಒಂದೆರಡು ದಿನದಲ್ಲಿ ಭಿನ್ನಮತೀಯರ ಸಭೆ ನಡೆಸಲು ನಿರ್ಧರಿಸಿರುವುದು ಬಿಜೆಪಿ ಒಂದಷ್ಟು ಸಂಕಷ್ಟ ತಂದು ಕೊಡಲಿದೆ.

ಇದೆಲ್ಲದಕ್ಕಿಂತ ಮುಖ್ಯವಾಗಿ, ಕೂಡಲಸಂಗಮದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಗುಡುಗಿದ್ದು ಬಿಜೆಪಿಗೆ ನಡುಕ ಶುರುವಾಗಿದೆ. ಪಂಚಸಾಲಿ ಸಮಾಜದ ಮುಖಂಡರು ಬಿಜೆಪಿ ಯಿಂದ ಹೊರಬರಬೇಕು. ಯತ್ನಾಳ ಪರ ನಿಲ್ಲಬೇಕು ಎನ್ನುವ ಸೂಚನೆ, ಪಂಚಮಸಾಲಿ ಸಮಾಜದ ನಾಯಕರಿಗೂ ಬಿಸಿ ತುಪ್ಪವಾಗಿದೆ. ಒಂದು ರೀತಿ ಇದು ಪಂಚಮಸಾಲಿ ಸಮಾಜದವರಿಗೆ ಸ್ವಾಭಿಮಾನದ ಪ್ರಶ್ನೆಯಾಗಿದೆ.

ಯತ್ನಾಳ ಪರ ಸಮಾಜ ನಿಲ್ಲದಿದ್ದರೆ ಸಮಾಜದಲ್ಲಿ ಒಗ್ಗಟ್ಟು ಇಲ್ಲ ಎನ್ನುವ ಸಂದೇಶ ಹೊಗುತ್ತದೆ. ಸಮಾಜದ ಪರ ನಿಂತರೆ ಪಕ್ಷದ ಕಂಗೆಣ್ಣಿಗೆ ಗುರಿಯಾಗಿ, ಭವಿಷ್ಯದ ಅಧಿಕಾರ ರಾಜಕಾರಣದ ಅವಕಾಶ ಕಳೆದುಕೊಳ್ಳಬೇಕಾಗುತ್ತದೆ ಎನ್ನುವ ಆತಂತ ಒಂದೆಡೆ ಕಾಡುತ್ತಿದೆ. ಹೀಗಾಗಿ ಸದ್ಯಕ್ಕೆ ಯತ್ನಾಳ ಉಚ್ಚಾಟನೆ ಪರ್ವ ಬಿಜೆಪಿ ಶುಭಸೂಚಕವಂತೂ ಅಲ್ಲ.

---

### ಮಾರ್ಚ್ 30, ಚಾಂದ್ರಮಾನ ಯುಗಾದಿ ಹಬ್ಬದ ಪ್ರಯುಕ್ತ ವಿಶೇಷ ಲೇಖನ

# ಯುಗಾದಿ-ನವ ಸಂವತ್ಸರದ ಮನ್ವಂತರ

ಯುಗಾದಿ ಅಥವಾ ಉಗಾದಿ ಚೈತ್ರ ಮಾಸದ ಮೊದಲ ದಿನ. ಭಾರತದ ಅನೇಕ ಕಡೆಗಳಲ್ಲಿ ಈ ದಿನ ಹೊಸ ವರ್ಷದ ಮೊದಲ ದಿನ. ಹೊಸ ವರ್ಷದ ಹಬ್ಬವಾಗಿ ಯುಗಾದಿಯನ್ನು ಆಚರಿಸಲಾಗುತ್ತದೆ. ಯುಗಾದಿಯನ್ನು ಯುಗದ ಆದಿ ಎಂದೂ ಕರೆಯುತ್ತಾರೆ. ಅಂದರೆ 'ಹೊಸ ಯುಗದ ಆರಂಭ' ಎಂದರ್ಥ. ಹಿಂದೂ ಪಂಚಾಂಗದ ಪ್ರಕಾರ, ಪ್ರಸ್ತುತ ಫಾಲ್ಗುಣ ಮಾಸ, ಮಂಗಳಕರವಾದ ನಾಮ ವರ್ಷವು ಮಾರ್ಚ್ 29ರಂದು ಕೊನೆಗೊಳ್ಳುತ್ತದೆ. ಅದಾದ ನಂತರ ಮಾರ್ಚ್ 30ರಿಂದ ಚೈತ್ರ ಮಾಸ ಆರಂಭವಾಗಲಿದೆ. ಚೈತ್ರ ಮಾಸದ ಮೊದಲ ದಿನದಂದು ಯುಗಾದಿಯನ್ನು ಆಚರಿಸಲಾಗುತ್ತದೆ. ಈ ವರ್ಷ ಆ ದಿನದಿಂದ 'ವಿಶ್ವಾವಸುನಾಮ ಸಂವತ್ಸರ' ಪ್ರಾರಂಭವಾಗುತ್ತದೆ.

ಪ್ರಾಚೀನ ವೇದಗಳ ಕಾಲದಿಂದಲೂ ಯುಗಾದಿಯ ಮಹಿಮೆಯನ್ನು ಹೇಳಲಾಗಿದೆ. ಎಲ್ಲ ಶಾಸ್ತ್ರ ಗ್ರಂಥಗಳಲ್ಲಿ ಯುಗಾದಿಯ ಕುರಿತು ಹೇಳಲಾಗಿದೆ. ಶ್ರೀರಾಮನು ರಾವಣನನ್ನು ಸಂಹರಿಸಿ ಬಂದಾಗ ಅಯೋಧ್ಯೆಯಲ್ಲಿ ಶ್ರೀರಾಮಚಂದ್ರನ ಪಟ್ಟಾಭಿಷೇಕವಾದ ದಿನ. ಅಲ್ಲದೆ ಮಹಾಭಾರತದಲ್ಲಿ ಬರುವ ಚೇದಿರಾಜ್ಯದ ಅರಸು ವಸುವಿನ ಉಗ್ರ ತಪಸ್ಸಿಗೆ ಮೆಚ್ಚಿದ ಇಂದ್ರನು ವೈಜಯಂತಿ ಮಾಲೆಯನ್ನು ಅವನಿಗೆ ಕೊಟ್ಟು, ಚಿನ್ನದ ಕಲಶವುಳ್ಳ ಧ್ವಜವನ್ನು ರಾಜನ ತಲೆಯ ಮೇಲೆ ಇಟ್ಟಿರುವ ದಿನ.




ದಕ್ಷಿಣ ಭಾರತವನ್ನು ಆಳಿದ ಶಾಲಿವಾಹನನು ಚೈತ್ರಶುದ್ಧ ಪಾಡ್ಯಮಿಯಂದು ಶಾಲಿವಾಹನ ರಾಜ ಸಿಂಹಾಸನಾರೂಢನಾದನೆಂದೂ, ಆಗಿನಿಂದ ಶಾಲಿವಾಹನ ಶಕೆ ಆರಂಭವಾಯಿತೆಂದೂ ಹೇಳಲಾಗುತ್ತದೆ. ಹಿಂದುಗಳು ಶಾಲಿವಾಹನ ಶಕೆಯ ಸಂವತ್ಸರಗಳನ್ನಾಧರಿಸಿ ಆಯಾ ಸಂವತ್ಸರವನ್ನು ಚೈತ್ರ ಮಾಸದ ಪ್ರತಿಪದೆಯಿಂದ ಆರಂಭಿಸುವರು. ಅದುವೇ ಯುಗಾದಿಯ ಚಂದ್ರಮಾನದ ಸಂವತ್ಸರದ ಆರಂಭದ ದಿನ.

ಯುಗಾದಿ ಹಬ್ಬದ ಸಾಂಪ್ರದಾಯಿಕ ಆಚರಣೆಗಳಲ್ಲಿ ಸೂರ್ಯ ನಮಸ್ಕಾರ, ಪಂಚಾಂಗ ಪೂಜೆ, ಬೇವು-ಬೆಲ್ಲ ಸೇವನೆಗಳೂ ಸೇರಿವೆ. ಮುಖ್ಯವಾಗಿ ಚಾಂದ್ರಮಾನ ಹಾಗೂ ಸೌರಮಾನ ಎಂಬ ಎರಡು ಪ್ರಭೇದಗಳಿದ್ದು, ಹಿಂದೂ ಧರ್ಮದ ವೇದಾಂಗ ಜ್ಯೋತಿಷ ಶಾಸ್ತ್ರದಿಂದ ನಿರ್ಣಯಗೊಳ್ಳುತ್ತವೆ. ಚಂದ್ರನ ಚಲನೆಯನ್ನಾಧರಿಸಿ, ದಿನಗಣನೆ ಮಾಡುವುದನ್ನು ಚಾಂದ್ರಮಾನ ಹಾಗೂ ಸೂರ್ಯನ ಗತಿಯಿಂದ ಎಣಿಕೆ ಮಾಡುವುದನ್ನು ಸೌರಮಾನ ಎನ್ನುತ್ತಾರೆ. ಕರ್ನಾಟಕದಲ್ಲಿ ಚಾಂದ್ರಮಾನ ಪದ್ಧತಿ ಮೊದಲಿನಿಂದಲೂ ರೂಢಿಯಲ್ಲಿದೆ.

ಯುಗಾದಿಯ ಸಂದರ್ಭದಲ್ಲಿ ನವ ಉಲ್ಲಾಸ ನೀಡುವ ಭೂಮಿಯಲ್ಲಿ ಅನೇಕ ಬದಲಾವಣೆಗಳಾಗುತ್ತವೆ. ಪ್ರಕೃತಿಯೂ ಕೂಡ ಹೊಸತನದಿಂದ ತುಂಬಿ ನಲಿಯುತ್ತದೆ. ವಸಂತ ಋತುವಿನ ಪ್ರಾರಂಭ ಕಾಲವಾದ್ದರಿಂದ ಮರಗಳ ಎಲೆಗಳು ಉದುರಿ ಹೊಸ ಚಿಗುರು ಪ್ರಾರಂಭವಾಗುತ್ತದೆ. ಯುಗಾದಿಯ ದಿನ ಮುಂಜಾನೆ ಬೇವು ಮಿಶ್ರಿತ ನೀರಿನಿಂದ ಸ್ನಾನ ಮಾಡಿ, ಹೊಸಬಟ್ಟೆ ಧರಿಸಿ ತಮ್ಮ ತಮ್ಮ ಮನೆ ದೇವರನ್ನು ಪೂಜಿಸಿ, ಬೇವು ಬೆಲ್ಲವನ್ನು ಸೇವನೆ ಮಾಡುತ್ತಾರೆ.

ಯುಗಾದಿ ಅನೇಕ ಶುಭ ಕಾರ್ಯಗಳಿಗೆ ನಾಂದಿ ಹಾಡುತ್ತದೆ. ಯುಗಾದಿಯ ದಿನ ಬೇವು-ಬೆಲ್ಲವನ್ನು ತಿಂದು ಬದುಕಿನಲ್ಲಿ ಬರುವ ಸುಖ ಹಾಗೂ ಕಷ್ಟಗಳನ್ನು ಸಮಾನ ಮನಸ್ಸಿನಿಂದ ಸ್ವೀಕರಿಸುತ್ತೇವೆ ಎಂದು ಸಂಕಲ್ಪ ಮಾಡುತ್ತೇವೆ. ಯುಗಾದಿ ಹಬ್ಬವನ್ನು ಮಂಗಳಕರ ದಿನವೆಂದು ರೈತರು ಎತ್ತುಗಳನ್ನು ಶೃಂಗರಿಸಿ ಸಂಭ್ರಮದಿಂದ ರೈತರು ತಮ್ಮ ಹೊಲಗಳಿಗೆ ತೆರಳಿ ಪೂಜೆ ಸಲ್ಲಿಸಿ, ಇಲ್ಲಿಂದ ಉಳುಮೆ ಮಾಡಲು ಪ್ರಾರಂಭಿಸುತ್ತಾರೆ. ಜೊತೆಗೆ ಜನರು ತಮ್ಮ ಹೊಸ ಮನೆ ನಿರ್ಮಾಣಗಳನ್ನು ಪ್ರಾರಂಭಿಸುತ್ತಾರೆ. ಹೊಸದಾಗಿ ಪ್ರಾರಂಭಿಸಿರುವ ಮನೆಗಳ ಮುಖ್ಯ ಬಾಗಿಲು ನಿಲ್ಲಿಸಿ ಪೂಜೆ ಮಾಡುತ್ತಾರೆ.

ಬೇವು-ಬೆಲ್ಲ ಸೇರಿಸಿ ಸವಿಯುವುದು ಯುಗಾದಿ ದಿನದ ವೈಶಿಷ್ಟ್ಯ. ಈ ದಿನದಲ್ಲಿ ಸುಖದ ಸಂಕೇತವಾದ ಬೆಲ್ಲವನ್ನೂ ಮತ್ತು ಕಷ್ಟದ ಸಂಕೇತವಾದ ಬೇವನ್ನೂ ಸಮನಾಗಿ ಸ್ವೀಕರಿಸುವರು. ನೂರು ವರುಷಗಳ ಆಯುಷ್ಯ, ಸದೃಢ ಆರೋಗ್ಯ, ಸಕಲ ಸಂಪತ್ತುಗಳ ಪ್ರಾಪ್ತಿಗಾಗಿಯೂ, ಸಕಲ ಅರಿಷ್ಟ ನಿವಾರಣೆಗಾಗಿಯೂ ಬೇವು ಬೆಲ್ಲ ಸೇವನೆ ಮಾಡುತ್ತೇನೆ ಎಂದು ಪ್ರತೀತಿ ಇದೆ.

ಕರ್ನಾಟಕ, ಆಂಧ್ರಪ್ರದೇಶ, ಮಹಾರಾಷ್ಟ್ರ, ಗುಜರಾತ್ ಗಳಲ್ಲಿ ಚಂದ್ರಮಾನ ಯುಗಾದಿ ಆಚರಿಸಿದರೆ ತಮಿಳುನಾಡು, ಕೇರಳ ಮತ್ತು ಉತ್ತರ ಭಾರತದ ಕೆಲವು ಸ್ಥಳಗಳಲ್ಲಿ ಸೌರಮಾನ ಯುಗಾದಿ ಆಚರಿಸುತ್ತಾರೆ. ಉತ್ತರಭಾರತದಲ್ಲಿ ಕಾರ್ತಿಕ ಶುದ್ಧ ಪಾಡ್ಯಮಿಯನ್ನು ಯುಗಾದಿಯೆನ್ನುವರು. ಈ ಹಬ್ಬವನ್ನು ಭಾರತದಲ್ಲಿ ಬೇರೆ-ಬೇರೆ ಹೆಸರಿನಿಂದ ಆಚರಿಸುವರು. ಕರ್ನಾಟಕದಲ್ಲಿ 'ಯುಗಾದಿ', ಮಹಾರಾಷ್ಟ್ರದಲ್ಲಿ 'ಗುಢಿಪಾಡವಾ', ಆಂಧ್ರಪ್ರದೇಶ ಹಾಗೂ ತಮಿಳುನಾಡಿನಲ್ಲಿ 'ಹೊಸ ವರ್ಷದ ಹಬ್ಬ'ವೆಂದು, ಉತ್ತರ ಭಾರತದಲ್ಲಿ 'ಬೈಸಾಖಿ' ಎಂದು ಈ ಹಬ್ಬ ಆರಿಸಲ್ಪಡುತ್ತಾರೆ.

ಒಟ್ಟಾರೆಯಾಗಿ ಯುಗಾದಿಯು ಬದುಕಿನ ಎಲ್ಲ ಮಜಲುಗಳನ್ನು ಆತ್ಮವಿಶ್ವಾಸದಿಂದ ಎದುರಿಸಲು ಧೈರ್ಯ ನೀಡುತ್ತದೆ. ಜೀವನದ ಪಯಣದಲ್ಲಿ ಯುಗಾದಿ ಹರುಷ ತರಲಿ. ನೋವುಗಳೆಲ್ಲ ತೊಲಗಲಿ, ಸಂತಸದ ದಿನಗಳು ಬರಲಿ. ಸದಾ ಸುಖ, ಶಾಂತಿ, ಆರೋಗ್ಯ, ನೆಮ್ಮದಿ ತುಂಬಿದ ಬದುಕು ಎಲ್ಲರದ್ದಾಗಲಿ.



– ಬಸವರಾಜ ಎಮ್.ಯರಗುಪ್ಪಿ.
ಬಿಆರ್‌ಪಿ-ಶಿರಹಟ್ಟಿ, ಲಕ್ಷ್ಮೇಶ್ವರ.

---

### ಕಳಸಾಪೂರ ಗ್ರಾಮದ ಶ್ರೀ ಈಶ್ವರ ಬಸವಣ್ಣ ದೇವರ 15ನೇ ವರ್ಷದ ಜಾತ್ರಾ ಮಹೋತ್ಸವ

# ಸರ್ವಧರ್ಮ ಸಾಮೂಹಿಕ ವಿವಾಹ ಮಾ.30ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಳಸಾಪುರ ಗ್ರಾಮದಲ್ಲಿ ಶ್ರೀ ಈಶ್ವರ ಬಸವಣ್ಣ ದೇವರ 15ನೇ ವರ್ಷದ ಜಾತ್ರಾ ಮಹೋತ್ಸವ, ಶಿವಶರಣೆ ಗುಡ್ಡಾಪುರದ ಶ್ರೀ ದಾನಮ್ಮದೇವಿ ಪುರಾಣ ಪ್ರಾರಂಭೋತ್ಸವದ ಅಂಗವಾಗಿ ಮಾರ್ಚ್ 29ರಂದು ಸಂಜೆ 4 ಗಂಟೆಗೆ ಕುಂಭಮೇಳ ಹಮ್ಮಿಕೊಳ್ಳಲಾಗಿದೆ. ಮಾರ್ಚ್ 30ರಂದು ಬೆಳಿಗ್ಗೆ 11.30 ಗಂಟೆಗೆ ಸರ್ವಧರ್ಮ ಸಾಮೂಹಿಕ ವಿವಾಹ, ಸಂಜೆ 5.30 ಗಂಟೆಗೆ ಮಹಾರಥೋತ್ಸವ ನೆರವೇರಲಿದೆ.

ಮಾರ್ಚ್ 30ರಂದು ಬೆಳಿಗ್ಗೆ 11.30ಕ್ಕೆ ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಗುವದು. ಈ ಕಾರ್ಯಕ್ರಮದ ಪಾವನ ಸಾನ್ನಿಧ್ಯವನ್ನು ಬೆಂಗಳೂರು ಜಿಲ್ಲೆಯ ಸುಕ್ಷೇತ್ರದ ಶಿವಗಂಗಾದ ಪೂಜ್ಯಶ್ರೀ ಮಲಯ ಶಾಂತಮುನಿ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು. ಮಣಕವಾಡ ಶ್ರೀಗುರು ಅನ್ನದಾನೀಶ್ವರ ದೇವಮಂದಿರ ಮಹಾಮಠದ ಪೂಜ್ಯಶ್ರೀ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು, ಹರ್ಲಾಪೂರ ಶ್ರೀಕೊಟ್ಟೂರೇಶ್ವರ ಶ್ರೀಮಠದ ಪೂಜ್ಯಶ್ರೀ ಅಭಿನವ ಕೊಟ್ಟೂರೇಶ್ವರ ಶ್ರೀಗಳು, ಅಡ್ನೂರ-ರಾಜೂರ-ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು, ಹುಣಸಿಹಾಳ-ಸಂಗನಾಳ-ನಾಗರಾಳ ಬಸವಧರ್ಮ ಮಠದ ಪೂಜ್ಯಶ್ರೀ ಶಾಂತವೀರ ಮಹಾಸ್ವಾಮಿಗಳು, ಬಳಗಾನೂರ ಶ್ರೀ ಚನ್ನವೀರ ಶರಣರ ಮಠದ ಪೂಜ್ಯಶ್ರೀ ಶಿವಶಾಂತವೀರ ಶರಣರು, ಓಂಕಾರಗಿರಿ ಓಂಕಾರೇಶ್ವರ ಹಿರೇಮಠದ ಪೂಜ್ಯಶ್ರೀ ಫಕ್ಕಿರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಸಿದ್ದನಕೊಳ್ಳ ದಾಸೋಹಮಠದ ಪೂಜ್ಯಶ್ರೀ ಡಾ. ಶಿವಕುಮಾರ ಸ್ವಾಮಿಗಳು ಸಮ್ಮುಖ ವಹಿಸುವರು.



ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಸಂಸದ ಬಸವರಾಜ ಬೊಮ್ಮಾಯಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಎಸ್.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ತಿನ ಮುಖ್ಯ ಸಚೇತಕ ಸಲೀಂಅಹ್ಮದ್, ಮಾಜಿ ಶಾಸಕ ಡಿ.ಆರ್. ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಯುವ ಮುಖಂಡ ಅನಿಲ್ ಮೆಣಸಿನಕಾಯಿ, ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಧಾರವಾಡದ ಕೆಸಿಸಿ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ಬೆಳದಡಿ ಗ್ರಾಂ.ಪಂ ಮಾಜಿ ಅಧ್ಯಕ್ಷ ಶಂಭುಲಿಂಗಯ್ಯ ಕಲ್ಮಠ, ಕಳಸಾಪೂರ ಗ್ರಾ.ಪಂ ಅಧ್ಯಕ್ಷೆ ಅನಸೂಯಾ ಪಾಟೀಲ, ಉಪಾಧ್ಯಕ್ಷೆ ರಾಜೇಶ್ವರಿ ಘೋಡಕೆ ಆಗಮಿಸುವರು.

ಅತಿಥಿಗಳಾಗಿ ಶರದರಾವ್ ಹುಯಿಲಗೋಳ, ಪ್ರಭಯ್ಯ ದಂಡಾವತಿಮಠ, ಚಂದ್ರು ಬಾಳಿಹಳ್ಳಿಮಠ, ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ವಾಲ್ಮೀಕಿ ಸಮಾಜದ ಜಿಲ್ಲಾಧ್ಯಕ್ಷ ಬಸವರಾಜ ಬೆಳದಡಿ, ಬಂಜಾರಾ ಸಮಾಜದ ರಾಜ್ಯಾಧ್ಯಕ್ಷ ಆನಂದ ಅಂಗಡಿ, ಡಿವೈಎಸ್‌ಪಿ ಮಡಿವಾಳಪ್ಪ ಸಂಕದ, ಹುಬ್ಬಳ್ಳಿಯ ಸಂಜೀವಕುಮಾರ ಶಿಂಪರ, ಗದಗ ತಾ.ಪಂ ಮಾಜಿ ಅಧ್ಯಕ್ಷ ಪಿ.ಸಿ. ಹಿರೇಮಠ, ಎಸ್‌ಕೆಡಿಆರ್‌ಡಿಪಿ ಜಿಲ್ಲಾ ನಿರ್ದೇಶಕ ಯೋಗೇಶ ಎ., ಕಂದಾಯ ಇಲಾಖೆಯ ಗುರು ಹಡಗಲಿಮಠ, ಪತ್ರಕರ್ತರಾದ ಆನಂದಯ್ಯ ವಿರಕ್ತಮಠ, ಬೆಂಗಳೂರು ಹಾಲು ಉತ್ಪಾದಕರ ಸಂಘದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ, ಗದಗ ತಾ.ಪಂ ಮಾಜಿ ಅಧ್ಯಕ್ಷ ಬಿ.ಆರ್. ದೇವರಡ್ಡಿ, ಉದ್ಯಮಿ ಶಿವಯೋಗಿ ತೆಗ್ಗಿನಮಠ, ಹಾವೇರಿ ತಹಸೀಲ್ದಾರ ಕುಮಾರ ಅಣ್ಣಿಗೇರಿ, ಯುವ ಮುಖಂಡ ವಸಂತ ಪಡಗದ, ಮಂಜುನಾಥ ಮಾಗಡಿ, ಸುರೇಶ ಚವ್ಹಾಣ, ದಿ. ಸರಾಫ್ ಅಸೋಸಿಯೇಶನ್ ಅಧ್ಯಕ್ಷ ಸಿದ್ದಲಿಂಗೇಶ ಮೂರಶಿಳ್ಳಿನ, ಗದಗ ತಾ.ಪಂ ಮಾಜಿ ಅಧ್ಯಕ್ಷ ಬಸವಣ್ಣೆಪ್ಪ ಚಿಂಚಲಿ, ಬೇವಿನಹಳ್ಳಿಯ ಬಸನಗೌಡ ಪಾಟೀಲ, ಗದಗ ಜಾಮೀಯಾ ಮಸೀದಿ ಅಧ್ಯಕ್ಷ ಸಾಧಿಕಸಾಬ ನರಗುಂದ ಆಗಮಿಸುವರು.

ಮಾರ್ಚ್ 30ರಂದು ಸಂಜೆ 5.30 ಗಂಟೆಗೆ ಮಹಾರಥೋತ್ಸವ, ರಾತ್ರಿ 9 ಗಂಟೆಗೆ ಗದುಗಿನ ಸ್ಫೂರ್ತಿ ಮೆಲೋಡಿಸ್ ಅರ್ಕೆಸ್ಟ್ರಾ ಅವರಿಂದ ರಸಮಂಜರಿ ಕಾರ್ಯಕ್ರಮ ಜರುಗುವದು. ಮಾ.31 ರಂದು ಸಂಜೆ 5.30 ಗಂಟೆಗೆ ಲಘು ರಥೋತ್ಸವ, ರಾತ್ರಿ 9 ಗಂಟೆಗೆ ಕೊಪ್ಪಳದ ಅಭಿನವ ಮ್ಯೂಸಿಕಲ್ ಇವೆಂಟ್ಸ್ ಅವರಿಂದ ರಸಮಂಜರಿ ಕಾರ್ಯಕ್ರಮ ಜರಗುವದು ಎಂದು ಈಶ್ವರ ಬಸವಣ್ಣ ದೇವರ ಜಾತ್ರಾ ಮಹೋತ್ಸವ ಕಮಿಟಿಯು ಪ್ರಕಟಣೆಯಲ್ಲಿ ತಿಳಿಸಿದೆ.

---

# ಸ್ಲಂ ಅಭಿವೃದ್ಧಿಗೆ ಪ್ರತ್ಯೇಕ ಅನುದಾನ ಮೀಸಲಿಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದ ಕೊಳಚೆ ಪ್ರದೇಶಗಳಲ್ಲಿ ಯಾವುದೇ ನಾಗರಿಕ ಸೌಲಭ್ಯಗಳು ಇಲ್ಲದೇ ಸ್ಥಳೀಯ ಸ್ಲಂ ನಿವಾಸಿಗಳು ತೊಂದರೆ ಅನುಭವಿಸುತ್ತಿದ್ದಾರೆ. ನಗರದ ಶೇ.90ರಷ್ಟು ಕೊಳಗೇರಿ ಜನರು ನಗರಸಭೆಗೆ ತಮ್ಮ ಆಸ್ತಿ ತೆರಿಗೆಯನ್ನು ಕಟ್ಟುತ್ತಾರೆ. ಆದರೆ ನಗರಸಭೆಯಿಂದ ಸ್ಲಂ ಪ್ರದೇಶಗಳ ಅಭಿವೃದ್ಧಿ ಮಾಡುವಲ್ಲಿ ತಾರತಮ್ಯ ಮಾಡುತ್ತಿದ್ದು, ಈ ಬಾರಿ ನಗರಸಭೆಯ ಬಜೆಟ್‌ನಲ್ಲಿ ಅವಳಿ ನಗರದ ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗಾಗಿ ಪ್ರತ್ಯೇಕ ಅನುದಾನ ಮೀಸಲಿಡಬೇಕೆಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಒತ್ತಾಯಿಸಿದರು. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕರೆದಿದ್ದ ನರಗಸಭೆಯ 2025-26ನೇ ಸಾಲಿನ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಬಜೆಟ್ ಪೂರ್ವಭಾವಿ ಸಭೆಯನ್ನು ಕರೆಯಲಾಗುತ್ತಿದೆ. ಸಭೆಯಲ್ಲಿ ಅನೇಕ ಸಂಘ-ಸಂಸ್ಥೆಗಳ ಮುಖಂಡರು ನಗರದ ಅಭಿವೃದ್ಧಿಗಾಗಿ ಸಲಹೆಗಳನ್ನು ನೀಡುತ್ತಾರೆ. ಆದರೆ ಸಾರ್ವಜನಿಕರು ನೀಡಿರುವ ಅಭಿಪ್ರಾಯಗಳಿಗೆ ಆದ್ಯತೆ ನೀಡದೇ ತಮಗೆ ಮನಬಂದಂತೆ ಬಜೆಟ್ ತಯಾರಿಸಿ ಅನುದಾನ ನೀಡಲಾಗುತ್ತಿದೆ ಎಂದು ಆರೋಪಿಸಿದರು. ಕೇವಲ ಕಾಟಾಚಾರಕ್ಕಾಗಿ ಬಜೆಟ್ ಪೂರ್ವಭಾವಿ ಸಭೆಯನ್ನು ಕರೆಯಲಾಗುತ್ತಿದ್ದು, ಇದನ್ನು ಕೈಬಿಟ್ಟು ಸಂಘ-ಸಂಸ್ಥೆಗಳ ಮುಖಂಡರು ನೀಡಿರುವ ಸಲಹೆಗಳನ್ನೂ ಸ್ವೀಕರಿಸಿ ಸರ್ವಾಂಗೀಣ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.



---

# ಅಮಿತ್ ಶಾ ವಿರುದ್ಧದ ಹಕ್ಕುಚ್ಯುತಿ ನೋಟಿಸ್ ತಿರಸ್ಕರಿಸಿದ ಜಗದೀಪ್ ಧನಕರ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧದ ಹಕ್ಕುಚ್ಯುತಿ ಸೂಚನೆಯನ್ನು ರಾಜ್ಯಸಭೆ ಸ್ಪೀಕರ್ ಜಗದೀಪ್ ಧನಕರ್ ಗುರುವಾರ ತಿರಸ್ಕರಿಸಿದ್ದಾರೆ. ಪ್ರಧಾನಿಯ ರಾಷ್ಟ್ರೀಯ ಪರಿಹಾರ ನಿಧಿ(ಕಒಓಖಈ)ಯ ನಿರ್ವಹಣೆಯಲ್ಲಿ ಕಾಂಗ್ರೆಸ್ ನಾಯಕರೊಬ್ಬರು ಭಾಗವಾಗಿದ್ದಾರೆ ಎಂದು ಅಮಿತ್ ಹೇಳಿಕೆ ನೀಡಿದ್ದ ಹಿನ್ನಲೆ ಅವರ ವಿರುದ್ಧ ಹಕ್ಕುಚ್ಯುತಿ ಮಂಡನೆಗೆ ನೋಟಿಸ್ ನೀಡಲಾಗಿತ್ತು.

ಕಾಂಗ್ರೆಸ್ ಸಂಸದೀಯ ಪಕ್ಷದ ಮುಖ್ಯಸ್ಥೆ ಸೋನಿಯಾ ಗಾಂಧಿಯವರ ಮೇಲೆ ಈ "ಆಕ್ಷೇಪಣೆಗಳನ್ನು" ವ್ಯಕ್ತಪಡಿಸಿದ್ದಕ್ಕಾಗಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರು ಅಮಿತ್ ಶಾ ವಿರುದ್ಧ ನೋಟಿಸ್ ಸಲ್ಲಿಸಿದ್ದರು. ಅಮಿತ್ ಶಾ ವಿರುದ್ಧದ

ಮಾರ್ಚ್ 25 ರಂದು ರಾಜ್ಯಸಭೆಯಲ್ಲಿ 2024 ರ ವಿಪತ್ತು ನಿರ್ವಹಣಾ ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸುವಾಗ ಅಮಿತ್ ಶಾ ಈ ಹೇಳಿಕೆಗಳನ್ನು ನೀಡಿದ್ದರು. ಈ ವೇಳೆ ಅವರು ತಮ್ಮ ಹೇಳಿಕೆಯನ್ನು ದೃಢೀಕರಿಸಲು ಒಪ್ಪಿಕೊಂಡಿದ್ದಾರೆ ಎಂದು ಜಗದೀಪ್ ಧನಕರ್ ಹೇಳಿದ್ದಾರೆ.

ಜನವರಿ 24, 1998 ರಂದು ಭಾರತ ಸರ್ಕಾರದ ಪತ್ರಿಕಾ ಮಾಹಿತಿ ಬ್ಯೂರೋ ಹೊರಡಿಸಿದ ಪತ್ರಿಕಾ ಹೇಳಿಕೆಯನ್ನು ಉಲ್ಲೇಖಿಸಿದ್ದ ಗೃಹ ಸಚಿವ ಅಮಿತ್ ಶಾ, ಅದರಲ್ಲಿ ಆಗಿನ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರು ಅವರು ಕಒಓಖಈ ಅನ್ನು ಪ್ರಾರಂಭಿಸುವುದಾಗಿ ಘೋಷಿಸಿದ್ದರು. ಇದನ್ನು ಪ್ರಧಾನಿ, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷರು ಮತ್ತು ಇತರ ಕೆಲವು ಜನರು ಒಳಗೊಂಡ ಸಮಿತಿಯು ನಿರ್ವಹಿಸಬೇಕಿತ್ತು ಎಂದು ಹೇಳಿದ್ದರು.

"ನಾನು ಅದನ್ನು ಎಚ್ಚರಿಕೆಯಿಂದ ಪರಿಶೀಲಿಸಿದ್ದು, ಯಾವುದೇ ಉಲ್ಲಂಘನೆ ನಡೆದಿಲ್ಲ ಎಂದು ನಾನು ಕಂಡುಕೊಂಡಿದ್ದೇನೆ" ಎಂದು ಜಗದೀಪ್ ಧನಕರ್ ಹೇಳಿದ ಅವರು, ಹಕ್ಕುಚ್ಯುತಿ ಮಂಡನೆಯನ್ನು ತಿರಸ್ಕರಿಸಿದ್ದಾರೆ.

---

### ಗುರೂಜಿ ಯುವ ಕ್ರೀಡಾ-ಸಾಂಸ್ಕೃತಿಕ ಕಲಾ ಸಂಸ್ಥೆಯ 3ನೇ ವರ್ಷದ ವಾರ್ಷಿಕೋತ್ಸವ

# ಸಾಧಕರಿಗೆ ಪ್ರಶಸ್ತಿ ಪ್ರದಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗುರೂಜಿ ಯುವ ಕ್ರೀಡಾ ಹಾಗೂ ಸಾಂಸ್ಕೃತಿಕ ಕಲಾ ಸಂಸ್ಥೆಯ 3ನೇ ವರ್ಷದ ವಾರ್ಷಿಕೋತ್ಸವ, 'ಗದಗ ಗದ್ದುಗೆ ಗೌರವ-2025' ಪ್ರಶಸ್ತಿ ಪ್ರದಾನ, ಆದಿ ಜಗದ್ಗುರು ಶ್ರೀ ರೇಣುಕಾಚಾರ್ಯರರ ಜಯಂತ್ಯುತ್ಸವ ಹಾಗೂ ಶ್ರೀಗುರು ಲಿ. ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಜಯಂತ್ಯುತ್ಸವ ಕಾರ್ಯಕ್ರಮಗಳು ಜರುಗಿದವು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ.ಹಿರೇಮಠ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಗುರೂಜಿ ಯುವ ಕ್ರೀಡಾ ಹಾಗೂ ಸಾಂಸ್ಕೃತಿಕ ಕಲಾ ಸಂಸ್ಥೆಯು ಇಂತಹ ಅತ್ಯುತ್ತಮ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕಲಾವಿದರಿಗೆ ಪ್ರೋತ್ಸಾಹ ನೀಡಿ ಗೌರವಿಸುತ್ತಿರುವುದು ಶ್ಲಾಘನೀಯವಾಗಿದೆ.

ಈ ಸಂಸ್ಥೆಯು ಇನ್ನೂ ಉತ್ತರೋತ್ತರವಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು.

ಇದೇ ಸಂದರ್ಭದಲ್ಲಿ ಶಿವುಸ್ವಾಮಿ ಮ್ಯಾಗಳಮಠ ಹಾಗೂ ಕಲಾತಂಡದವರಿಂದ ಸುಗಮ ಸಂಗೀತ, ಅಕ್ಷತಾ ಹಿರೇಮಠರಿಂದ ಹಿಂದೂಸ್ತಾನಿ ಸಂಗೀತ, ಸಂತೋಷ ನಾಮದೇವ ತಂಡ, ಬಾಬು ಶಿದ್ಲಿಂಗ್ ಹಾಗೂ ತಂಡ, ರಾಹುಲ ರಾಠೋಡ ಹಾಗೂ ತಂಡ, ಪೂರ್ವಾಚಾರಿ ಬಡಿಗೇರ ಮತ್ತು ವಿನಾಯಕ ಇವರಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಚಯ್ಯ ಎಸ್.ಹೊಸಮಠ ವಹಿಸಿದ್ದರು. ಪ್ರೊ. ಕುಮಾರ ವಡೆಯರ ಉಪನ್ಯಾಸಕರಾಗಿ, ಅಡವೀಂದ್ರಸ್ವಾಮಿಮಠದ ಧರ್ಮದರ್ಶಿಗಳಾದ ವೇ. ಮಹೇಶ್ವರ ಸ್ವಾಮಿಗಳು, ವಿಜಯಕುಮಾರ ಹಿರೇಮಠ, ಸೋಮಶೇಖರ ಚಿಕ್ಕಮಠ, ಶ್ರೀರಾಮ ಸೇನಾದ ರಾಜು ಖಾನಪ್ಪನವರ, ಪ್ರಭಾವತಿ ಬೆಳವಣಕಿಮಠ, ಸುರೇಶ ಬಿ.ಹೊಸಮನಿ ಉಪಸ್ಥಿತರಿದ್ದರು.



'ಸಂಗೀತ ಸಂಪತ್ತು' ಪ್ರಶಸ್ತಿಗೆ ಭಾಜನರಾದ ವಿಠ್ಠಲ ಪಡಸಲಗಿ, 'ಸಾಹಿತ್ಯ ಸಂಪತ್ತು' ಪ್ರಶಸ್ತಿಗೆ ಭಾಜನರಾದ ವ್ಹಿ.ವ್ಹಿ. ಹಿರೇಮಠ, 'ಆರೋಗ್ಯ ಸಂಪತ್ತು' ಪ್ರಶಸ್ತಿಗೆ ಭಾಜನರಾದ ಡಾ. ಸುಭಾಸ ವಿ.ಶಿವನಗೌಡರ, 'ಸಮಾಜ ಸಂಪತ್ತು' ಪ್ರಶಸ್ತಿಗೆ ಭಾಜನರಾದ ಮಹೇಶ ರೋಖಡೆ, 'ಗುರು ಸಂಪತ್ತು' ಪ್ರಶಸ್ತಿ ಭಾಜನರಾದ ಪಿ.ಎ. ಕುಲಕರ್ಣಿ, 'ಕಾಯಕ ಸಂಪತ್ತು' ಪ್ರಶಸ್ತಿ ಭಾಜನರಾದ ಜನಾರ್ಧನ ನಾಯರಿ, 'ಸುದ್ದಿ ಸಂಪತ್ತು' ಪ್ರಶಸ್ತಿ ಭಾಜನರಾದ ಲಕ್ಷ್ಮಣ ವಗ್ಗಿಯವರನ್ನು ಸನ್ಮಾನಿಸಿ ಗೌರವಿಸಲಾಯಿತು.

---

# ನಂದಿನಿ ಹಾಲು ಬೆಲೆ ಏರಿಕೆ | ಏಪ್ರಿಲ್ 1ರಿಂದ ಲೀಟರ್‌ಗೆ 4 ರೂ. ಹೆಚ್ಚಳ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಏಪ್ರಿಲ್ 1 ರಿಂದ ಹಾಲಿನ ಬೆಲೆಯನ್ನು ಪ್ರತಿ ಲೀಟರ್‌ಗೆ 4 ರೂ. ಹೆಚ್ಚಳ ಮಾಡಲು ರಾಜ್ಯ ಸರ್ಕಾರ ಗುರುವಾರ ಅನುಮೋದನೆ ನೀಡಿದೆ ಎಂದು ವರದಿಯಾಗಿದೆ. ನಂದಿನಿ ಹಾಲು ಬೆಲೆ ಏರಿಕೆ

ಈ ವಾರದ ಆರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ಲಿಮಿಟೆಡ್ (ಕೆಎಂಎಫ್) ಮತ್ತು ಜಿಲ್ಲಾ ಹಾಲು ಒಕ್ಕೂಟಗಳ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಸಭೆ ನಡೆಸಿ, ಸಚಿವ ಸಂಪುಟದಲ್ಲಿ ಚರ್ಚೆಯ ನಂತರ ಬೆಲೆ ಏರಿಕೆಯ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದರು.

# ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷವು ಎಪ್ರಿಲ್ 2 ರಂದು ಶ್ರೀ ದೇವರ ದಾಸೀಮಯ್ಯ ಜಯಂತಿ ನಿಮಿತ್ತ ಮಾರ್ಚ್ 28 ರಂದು ಸಂಜೆ 4.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾಲಿನ ದರ ಬೆನ್ನಲ್ಲೇ ವಿದ್ಯುತ್ ದರ ಹೆಚ್ಚಳ ಮಾಡಿದ ರಾಜ್ಯ ಸರ್ಕಾರ..!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಲೆ ಏರಿಕೆಯ ಹೊಡೆತದಿಂದ ಕಂಗೆಟ್ಟಿರುವ ರಾಜ್ಯದ ಜನತೆಗೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಕೂಡ ಶಾಕ್ ನೀಡಿದೆ. ಹೌದು ಪ್ರತಿ ಯೂನಿಟ್‌ಗೆ 36 ಪೈಸೆ ಹೆಚ್ಚಳ ಮಾಡಿ ಕೆಇಆರ್‌ಸಿ ಗುರುವಾರ ಅಧಿಕೃತ ಆದೇಶ ಹೊರಡಿಸಿದ್ದು, ಪರಿಷ್ಕೃತ ವಿದ್ಯುತ್ ದರ ಎಪ್ರಿಲ್ 1ರಿಂದಲೇ ಅನ್ವಯವಾಗಲಿದೆ.

ಯೂನಿಟ್‌ಗೆ 49 ಪೈಸೆ ಏರಿಕೆ ಮಾಡುವಂತೆ ಡಿಸೆಂಬರ್ ಕೊನೆಯ ವಾರದಲ್ಲಿ ಎಸ್ಕಾಂಗಳು ಕೆಇಆರ್‌ಸಿಗೆ ಪ್ರಸ್ತಾವನೆ ಸಲ್ಲಿಸಿದ್ದವು. ಪ್ರಸ್ತಾವನೆಯಂತೆ ಉತ್ಪಾದನೆಯ ಖರ್ಚು-ವೆಚ್ಚ ಮತ್ತು ನಿರ್ವಹಣೆಯ ನಷ್ಟ ಸರಿದೂಗಿಸುವ ನಿಟ್ಟಿನಲ್ಲಿ ದರ ಏರಿಕೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.

ಹೀಗಾಗಿ ಗುರುವಾರ ಕೆಇಆರ್‌ಸಿ ಅಧಿಕೃತವಾಗಿ ಪ್ರತಿ ಯೂನಿಟ್ ವಿದ್ಯುತ್ ಗೆ 36 ಪೈಸೆ ಏರಿಕೆ ಮಾಡಿ ಆದೇಶ ಹೊರಡಿಸಿದೆ.

### ಪತ್ರಿಕಾಗೋಷ್ಠಿಯಲ್ಲಿ ಕರಿಯಮ್ಮದೇವಿ ಬಡಾವಣೆ ಸುಧಾರಣಾ ಸಮಿತಿ ಗೌರವಾಧ್ಯಕ್ಷ ಎಲ್.ಡಿ. ಚಂದಾವರಿ ಮಾಹಿತಿ

# ಮಾರ್ಚ್ 28ರಿಂದ ಕರಿಯಮ್ಮ ದೇವಿ ಜಾತ್ರೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರಿಯಮ್ಮ ದೇವಿಯ 96ನೇ ಜಾತ್ರಾ ಮಹೋತ್ಸವ ಹಾಗೂ 25ನೇ ವರ್ಷದ ರಜತ ಮಹೋತ್ಸವಕ್ಕೆ ಸಂಬಂಧಿಸಿದ ಸ್ಮರಣ ಸಂಚಿಕೆ ಬಿಡುಗಡೆ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಮಾರ್ಚ್ 28ರಿಂದ 31ರವರೆಗೆ ನಡೆಯಲಿವೆ ಎಂದು ಕರಿಯಮ್ಮದೇವಿ ಬಡಾವಣೆ ಸುಧಾರಣಾ ಸಮಿತಿ ಗೌರವಾಧ್ಯಕ್ಷ ಎಲ್.ಡಿ. ಚಂದಾವರಿ ತಿಳಿಸಿದರು.

ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಮಾ.28ರಂದು ಜಾತ್ರಾ ಮಹೋತ್ಸವ ಸಮಾರಂಭಗಳು ಪ್ರಾರಂಭಗೊಳ್ಳಲಿದ್ದು, ಬೆಳಿಗ್ಗೆ 9ಕ್ಕೆ ಕರಿಯಮ್ಮದೇವಿ ಬೆಳ್ಳಿ ಉತ್ಸವ ಮೂರ್ತಿ ದರ್ಶನ, ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಲಿವೆ. ಸಂಜೆ 4ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ರಂಗೋಲಿ ಸ್ಪರ್ಧೆ, ವಚನ ಗಾಯನ ಸ್ಪರ್ಧೆಗಳು ನಡೆಯಲಿವೆ. ಕರಿಯಮ್ಮ ದೇವಿ ಬಡಾವಣೆ ಸುಧಾರಣಾ ಸಮಿತಿಯ ಅಧ್ಯಕ್ಷ ಸಿ.ಕೆ. ಮಾಳಶೆಟ್ಟಿ ಸ್ಪರ್ಧಾ ಕಾರ್ಯಕ್ರಮಕ್ಕೆ ಚಾಲನೆ ನೀಡುವರು ಎಂದು ತಿಳಿಸಿದರು.




ಮಾರ್ಚ್ 29ರಂದು ಬೆಳಿಗ್ಗೆ 7ಕ್ಕೆ ಚಂಡಿಕಾ ಹೋಮ ನಡೆಯಲಿದೆ. ಸಂಜೆ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮದ ಸಾನ್ನಿಧ್ಯವನ್ನು ರಾಜಶೇಖರ ಶಿವಾಚಾರ್ಯ ಸ್ವಾಮೀಜಿ ವಹಿಸುವರು. ಜಾತ್ರಾ ಸಮಿತಿ ಅಧ್ಯಕ್ಷ ಎ.ಟಿ. ನರೇಗಲ್ಲ ಅಧ್ಯಕ್ಷತೆ ವಹಿಸುವರು. ಜಿ.ಪಿ. ಪಾಟೀಲ, ಸಿ.ಕೆ. ಮಾಳಶೆಟ್ಟಿ, ಬಿ.ಆರ್. ಜಾಲಿಹಾಳ, ಡಾ. ಎನ್.ಎಂ. ಅಂಬಲಿಯವರ, ಡಾ. ರಾಜೇಂದ್ರ ಗಡಾದ, ಎಸ್.ಎ. ಹೊಳೆಯಣ್ಣವರ ಅತಿಥಿಗಳಾಗಿ ಭಾಗವಹಿಸುವರು ಎಂದು ತಿಳಿಸಿದರು.

ಮಾರ್ಚ್ 30ರಂದು ಮಧ್ಯಾಹ್ನ 2.30ಕ್ಕೆ ಮಂಗಳವಾದ್ಯಗಳೊಂದಿಗೆ ಕರಿಯಮ್ಮದೇವಿ ಪಾಲಕಿ ಉತ್ಸವ, ಸಂಜೆ 5.30ಕ್ಕೆ ಮಹಾರಥೋತ್ಸವ ನಡೆಯಲಿದೆ. ಬಳಿಕ ನಡೆಯುವ ಸಭಾ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಸ್ಮರಣ ಸಂಚಿಕೆ ಬಿಡುಗಡೆ ಮಾಡುವರು. ಎಲ್.ಡಿ. ಚಂದಾವರಿ ಅಧ್ಯಕ್ಷತೆ ವಹಿಸುವರು. ಶಾಸಕ ಸಿ.ಸಿ. ಪಾಟೀಲ ಹಾಗೂ ವಿಜಯಲಕ್ಷ್ಮೀ ಎಸ್.ದಿಂಡೂರ ಅತಿಥಿಗಳಾಗಿ ಭಾಗವಹಿಸುವರು ಎಂದು ಮಾಹಿತಿ ನೀಡಿದರು.

ಮಾರ್ಚ್ 31ರಂದು ಮಧ್ಯಾಹ್ನ 1ಕ್ಕೆ ಮಹಾ ಅನ್ನಸಂತರ್ಪಣೆ, ಸಂಜೆ 6ಕ್ಕೆ ಕಡುಬಿನ ಕಾಳಗ ನಡೆಯಲಿದೆ. ಸಂಜೆ 7ಕ್ಕೆ ನಡೆಯುವ ಸಾಂಸ್ಕಥಿಕ ಕಾರ್ಯಕ್ರಮದ ಸಾನ್ನಿಧ್ಯವನ್ನು ಶಂಕರಾನಂದ ಸ್ವಾಮೀಜಿ ವಹಿಸುವರು. ಶಿವಾನಂದ ಭಜಂತ್ರಿ ರಚಿಸಿರುವ 'ನಮ್ಮೆಲ್ಲರ ಅಮ್ಮ ಕರಿಯಮ್ಮ' ಕವನ ಸಂಕಲವನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ ಬಿಡುಗಡೆ ಮಾಡುವರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅತಿಥಿಯಾಗಿ ಭಾಗವಹಿಸುವರು. ಸ್ಮರಣ ಸಂಚಿಕೆ ರೂಪಿಸಲು ನೆರವು ನೀಡಿದ ದಾನಿಗಳನ್ನು ಸನ್ಮಾನಿಸಲಾಗುವುದು ಎಂದು ಎಲ್.ಡಿ. ಚಂದಾವರಿ ತಿಳಿಸಿದರು.

ಈ ಸಂದರ್ಭದಲ್ಲಿ ಸಿ.ಕೆ. ಮಾಳಶೆಟ್ಟಿ, ಎ.ಟಿ. ನರೇಗಲ್, ಶಶಿಧರ ದಿಂಡೂರ, ಜಿ.ಬಿ. ಗಾರವಾಡ, ಶಂಕರ್ ಹಾನಗಲ್, ಡಾ. ಎನ್.ಎಂ. ಅಂಬಲಿಯವರ, ಅಂದಾನಪ್ಪ ವಿಭೂತಿ ಇದ್ದರು.

# ಬೆಳೆ ಪರಿಹಾರ ಮಂಜೂರು ಮಾಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಾ ಭಾರತೀಯ ಕಿಸಾನ್ ಸಂಘವು ಬೆಳೆ ವಿಮೆ, ಬೆಳೆ ಪರಿಹಾರ ಮಂಜೂರು ಮಾಡುವಂತೆ ಅಧ್ಯಕ್ಷ ಅಜಯ ಕರಿಗೌಡ್ರ ಅವರ ನೇತೃತ್ವದಲ್ಲಿ ತಹಸೀಲ್ದಾರರ ಮೂಲಕ ಸರಕಾರಕ್ಕೆ ಮನವಿ ಅರ್ಪಿಸಿದರು.



ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಗ್ರೇಡ್ 2 ತಹಸೀಲ್ದಾರ ಮಂಜುನಾಥ ಅಮಾಸಿ ಅವರಿಗೆ ಮನವಿ ಸಲ್ಲಿಸಿದ ಭಾರತೀಯ ಕಿಸಾನ್ ಸಂಘದ ತಾಲೂಕಾಧ್ಯಕ್ಷ ಅಜಯ ಕರೀಗೌಡ್ರ ಮಾತನಾಡಿ, ಕೊಳವೆ ಬಾವಿಗಳು ಬತ್ತಿಹೋಗಿ, ನೀರಾವರಿ ಸೌಲಭ್ಯದಿಂದ ವಂಚಿತವಾಗಿದ್ದರಿಂದ ರೈತರ ಜಮೀನುಗಳಲ್ಲಿ ಬೆಳೆ ಹಾನಿಯಾಗಿದ್ದು, ಇದಕ್ಕಾಗಿ ಬೆಳೆ ವಿಮೆ ಮತ್ತು ಬೆಳೆಪರಿಹಾರ ಮಂಜೂರು ಮಾಡಬೇಕೆಂದು ವಿನಂತಿಸಿದರು.

ತಾಲೂಕಿನ ದೊಡ್ಡುರ, ಸೂರಣಗಿ, ಉಳ್ಳಟ್ಟಿ, ಉಂಡೇನಹಳ್ಳಿ, ಶ್ಯಾಬಳ, ಶಿಗ್ಲಿ, ಗೋವನಾಳ, ಮುನಿಯನತಾಂಡಾ, ದೊಡುರ ತಾಂಡಾ, ಸುವರ್ಣಗಿರಿ, ಅಡರಕಟ್ಟಿ, ಲಕ್ಷ್ಮೇಶ್ವರ, ಹರದಗಟ್ಟಿ, ಹಿರೇಮಲ್ಲಾಪುರ, ವಡೆಯರಮಲ್ಲಾಪುರ, ಗುಲಗಂಜಿಕೊಪ್ಪ, ರಾಮಗೇರಿ, ಯಳವತ್ತಿ, ಯತ್ತಿನಹಳ್ಳಿ, ಮಾಡಳ್ಳಿ ಈ ಗ್ರಾಮಗಳಲ್ಲಿನ ನೀರಾವರಿ ಜಮೀನುಗಳಲ್ಲಿರುವ ಕೊಳವೆಬಾವಿಗಳು ಬತ್ತಿಹೋಗಿವೆ. ಇದರಿಂದ ಪ್ರಮುಖ ಬೆಳೆಗಳಾದ ಶೇಂಗಾ, ಅಲಸಂದಿ, ಜೋಳ, ಗೋದಿ ಇವುಗಳು ನಿರೀಕ್ಷಿತ ಪ್ರಮಾಣದಲ್ಲಿ ಬೆಳೆಯದೆ ರೈತರು ಹಾನಿ ಅನುಭವಿಸುವಂತಾಗಿದೆ ಎಂದರು.

ಸಂಘದ ತಾಲೂಕಾ ಕಾರ್ಯದರ್ಶಿ ಲಕ್ಷ್ಮಣ ಲಮಾಣಿ ಮಾತನಾಡಿ, ರೈತರು ಸಂಕಷ್ಟದಲ್ಲಿದ್ದು, ಈ ಬಾರಿ ಅಧಿಕ ಪ್ರಮಾಣದ ಬೇಸಿಗೆ ಇರುವದರಿಂದ ಹೊಲದಲ್ಲಿನ ಬೆಳೆಗಳು ಒಣಗಿ ಹೋಗುತ್ತಿವೆ. ಸರ್ಕಾರ ರೈತರ ಬಗ್ಗೆ ಕಾಳಜಿ ವಹಿಸಿ ಬೆಳೆ ವಿಮೆ, ಬೆಳೆ ಪರಿಹಾರ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಗಂಗಾಧರ ಬಂಕಾಪೂರ, ಸುರೇಶ ಬಾಗಲದ, ಅಲ್ತಾಫ ನೂರಬೇಗ ಮೀರಜ, ದಾದಾಪೀರ ನೂರಬೇಗ ಮೀರಜ, ಮಲ್ಲಿಕಾರ್ಜುನ ಗೊರವರ, ರಾಮಪ್ಪ ಲಮಾಣಿ, ನಿಂಗನಗೌಡ್ರ ಪಾಟೀಲ್, ರಮೇಶ ಹುಲಕೋಟಿ, ರಮೇಶ ಕೋಳಿವಾಡ, ಮಹಾಲಿಂಗಪ್ಪ ನಾದಿಗಟ್ಟಿ, ಶಿವಮೂರ್ತೆಪ್ಪ ಈಳಿಗೇರ, ಚಂದ್ರಗೌಡ ಕರೆಗೌಡ್ರ, ವಸಂತಗೌಡ್ರ ಕರೆಗೌಡ್ರ, ಮುತ್ಯಾರ ನೂರಮಿರ್ಜಾ ಮುಂತಾದವರಿದ್ದರು.

### ಶ್ರೀ ಜಗದ್ಗುರು ರಂಭಾಪುರೀಶ್ವರ ಸದನದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ರಂಭಾಪುರಿ ಶ್ರೀಗಳು

# ರಚನಾತ್ಮಕ ಕಾರ್ಯಗಳಿಂದ ಸಮಾಜ ಸಮೃದ್ಧ

■ವಿಜಯಸಾಕ್ಷಿ ಸುದ್ದಿ, ಆಳಂದ

ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖ, ಶಾಂತಿಯ ಬದುಕಿಗೆ ಧರ್ಮ ಪರಿಪಾಲನೆ ಮುಖ್ಯ. ರಚನಾತ್ಮಕ ಮತ್ತು ಗುಣಾತ್ಮಕ ಸತ್ಕಾರ್ಯಗಳಿಂದ ಸಮಾಜ ಸದೃಢಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಚಲಗೇರಾ ಗ್ರಾಮದಲ್ಲಿ ಶ್ರೀ ಜಗದ್ಗುರು ರಂಭಾಪುರೀಶ್ವರ ಸದನದ ಲೋಕಾರ್ಪಣೆ, ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸದಿದ್ದರೆ ಜೀವನ ವ್ಯರ್ಥ. ಸುಖವನ್ನು ಎಲ್ಲರೂ ಬಯಸುವರು. ಆದರೆ ಆ ದಾರಿಯಲ್ಲಿ ನಡೆಯುವುದಿಲ್ಲ.



ಪಾಪದ ಫಲ ಯಾರೂ ಬಯಸುವುದಿಲ್ಲ. ಆದರೆ ಪುಣ್ಯ ಕಾರ್ಯ ಮಾಡಲು ಹಿಂಜರಿಯುತ್ತಾನೆ. ಬಿತ್ತಿದ ಬೀಜದ ಬೆಳೆಯನ್ನೇ ಬೆಳೆಯುವಂತೆ ಅವರವರ ಆಚರಣೆಯಂತೆ ಫಲಗಳನ್ನು ಪಡೆಯಲು ಸಾಧ್ಯವಾಗುತ್ತದೆ. ಮೌಲ್ಯಾಧಾರಿತ ಜೀವನಕ್ಕೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಕೊಟ್ಟ ದಶ ಧರ್ಮ ಸೂತ್ರಗಳು ಸಕಲರ ಬಾಳಿಗೆ ಬೆಳಕು ತೋರಿವೆ ಎಂದರು.

ನೇತೃತ್ವ ವಹಿಸಿದ ಚಲಗೇರಾ ಹಿರೇಮಠದ ಶಾಂತವೀರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಈ ಭಾಗದ ಭಕ್ತರಿಗೆ ಹಬ್ಬದ ಸಂಭ್ರಮ ಉಂಟಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಎಲ್ಲ ಭಕ್ತರ ಸಹಕಾರದಿಂದ ಭವ್ಯ ಸುಂದರವಾದ ಶ್ರೀ ಜಗದ್ಗುರು ರಂಭಾಪುರೀಶ್ವರ ಸದನ ನಿರ್ಮಾಣಗೊಂಡು ಇಂದು ಉದ್ಘಾಟನೆಯಾಗುತ್ತಿರುವುದು ಸಕಲ ಸದ್ಭಕ್ತರಿಗೆ ಹರುಷ ಉಂಟು ಮಾಡಿದೆ. ಕಟ್ಟಡ ನಿರ್ಮಾಣದಲ್ಲಿ ಸಹಕರಿಸಿದ ಎಲ್ಲ ದಾನಿಗಳನ್ನು ಎಷ್ಟು ಸ್ಮರಿಸಿದರೂ ಕಡಿಮೆ ಎಂದರು.

ಸಮಾರಂಭ ಉದ್ಘಾಟಿಸಿದ ಕಲಬುರ್ಗಿ ಕೆ.ಎಮ್.ಎಫ್. ಅಧ್ಯಕ್ಷ ಆರ್.ಕೆ. ಪಾಟೀಲ ಮಾತನಾಡಿ, ವೀರಶೈವ ಧರ್ಮ ಸಕಲರ ಹಿತವನ್ನು ಬಯಸಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಸ್ಥಾಪಿಸಿದ ವೀರಶೈವ ಧರ್ಮದಲ್ಲಿ ಗಂಡು-ಹೆಣ್ಣು, ಉಚ್ಚ-ನೀಚ, ಬಡವ-ಬಲ್ಲಿದ ಎನ್ನದೇ ಸರ್ವರಿಗೂ ಸಮಾನ ಅವಕಾಶ ಕಲ್ಪಿಸಿದ್ದಾರೆ ಎಂದರು.

ಆಲಮೇಲ ಚಂದ್ರಶೇಖರ ಶಿವಾಚಾರ್ಯರು, ಮಾದನ ಹಿಪ್ಪರಗಿ ವಿರಕ್ತಮಠದ ಅಭಿನವ ಶಿವಲಿಂಗ ಸ್ವಾಮಿಗಳು, ನೀರಗುಡಿ ಮಲ್ಲಿನಾಥ ಮಹಾರಾಜರು, ಹತ್ತಿಕಣಬದ ಪ್ರಭುಶಾಂತ ಸ್ವಾಮಿಗಳು, ಹಿರೊಳ್ಳಿ ಶಿವಬಸವ ಶ್ರೀಗಳು, ಸರಸಂಬಾ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಮುಖ್ಯ ಅತಿಥಿಗಳಾಗಿ ಜಿ.ಪಂ ಮಾಜಿ ಸದಸ್ಯ ಗುರುಶಾಂತ ಎಸ್.ಪಾಟೀಲ್, ಕಾಂಗ್ರೆಸ್ ಯುವ ಮುಖಂಡರಾದ ಅರುಣಕುಮಾರ, ಎಮ್.ವಾಯ್. ಪಾಟೀಲ, ಶಿವಾನಂದ ಪಾಟೀಲ, ಗುರುಗೌಡ ಕೋರಳ್ಳಿ, ಶರಣು ಭೂಸನೂರ, ಶರಣು ನರೋಣಿ, ಡಿಸಿಸಿ ಬ್ಯಾಂಕ ನಿರ್ದೇಶಕರಾದ ಅಶೋಕ ಸಾವಳೇಶ್ವರ, ಬಸವರಾಜ ಉಪ್ಪಿನ, ಈರಣ್ಣ ಝಳಕಿ, ಉದ್ಯಮಿ ಆನಂದ ದೇಶಮುಖ, ಶಿವಶರಣಪ್ಪ ಸೀರಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

### ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಡಾ. ಸ್ನೇಹಾ ಶಿರೋಳ ಉಪನ್ಯಾಸ

# ಮಹಿಳೆಯರು ಆರೋಗ್ಯಕ್ಕೆ ಆದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆ ಇಂದು ಎಲ್ಲಾ ಕ್ಷೇತ್ರದಲ್ಲಿ ತನ್ನ ಸಾಧನೆಯನ್ನು ತೋರುತ್ತಿದ್ದಾಳೆ. ಅಂತೆಯೇ ಬಹಳಷ್ಟು ರೀತಿಯಲ್ಲಿ ಆರೋಗ್ಯದ ಸಮಸ್ಯೆಯನ್ನು ಸಹ ಎದುರಿಸುತ್ತಿದ್ದಾಳೆ. ಮಹಿಳೆ ಇಂದು ಹಿಂದಿಗಿಂತಲೂ ಹೆಚ್ಚಾಗಿ ಆರೋಗ್ಯಕ್ಕೆ ಮೊದಲ ಆದ್ಯತೆ ನೀಡಬೇಕು. ಇಂದಿನ ಆಧುನಿಕ ಜೀವನ ಶೈಲಿ ಆಹಾರ ಪದ್ಧತಿ ಬಹಳಷ್ಟು ಬದಲಾವಣೆ ಆಗಿರುವುದರಿಂದ ಇಂದು ಅದೆಷ್ಟೋ ಆರೋಗ್ಯದ ಸಮಸ್ಯೆಗಳಿಗೆ ಬಲಿಯಾಗುತ್ತಿದ್ದಾರೆ. ಜೀವನದ ಏರಿಳಿತಗಳಲ್ಲಿ ಸಮ ಚಿತ್ತವನ್ನು ಕಾಯ್ದುಕೊಳ್ಳುವ ಸ್ವಭಾವವನ್ನು ಇಂದಿನ ಮಹಿಳೆ ರೂಡಿಸಿಕೊಳ್ಳಬೇಕು ಎಂದು ಸ್ತ್ರೀರೋಗ ತಜ್ಞರಾದ ಡಾ. ಸ್ನೇಹಾ ಶಿರೋಳ ಕಿವಿಮಾತು ಹೇಳಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷರಾದ ಪ್ರೇಮಾ ಮೇಟಿ ಮಾತನಾಡುತ್ತಾ, ಮಹಿಳೆ ಎನ್ನುವ ಶಕ್ತಿ ಮನೆಯನ್ನು, ಸಮಾಜವನ್ನು ಬೆಳಗುವ ಬೆಳಕಾಗಬೇಕು. ಶಿವಶರಣರ ಆದರ್ಶಗಳು ನಮ್ಮ ಜೀವನಕ್ಕೆ ಬುನಾದಿಯಾಗಬೇಕು. ತಾಯಿ ನೀಡುವ ಮೌಲ್ಯಗಳನ್ನು ಮರೆಯದೆ ಜೀವನದಲ್ಲಿ ಅನ್ವಯಿಸಿಕೊಳ್ಳುವ ಪ್ರವೃತ್ತಿ ಮಹಿಳಾ ಸಂಕುಲದ್ದಾಗಬೇಕು. ಹೆಣ್ಣು ಸಮಾಜದ ಕಣ್ಣಾಗಿ ಬದುಕನ್ನು ನಿರ್ವಹಿಸುವ ಕಲೆಯನ್ನು ರೂಡಿಸಿಕೊಳ್ಳಬೇಕು ಎಂದರು.

ಶಿವಶರಣೆ ಹೇಮರಡ್ಡಿ ಮಲ್ಲಮ್ಮ ವಿವಿಧೋದ್ದೇಶ ಮಹಿಳಾ ಟ್ರಸ್ಟ್ ಗದಗ ವತಿಯಿಂದ ಗದುಗಿನ ತೋಟಗಾರಿಕಾ ಇಲಾಖೆಯ ಆವರಣದಲ್ಲಿರುವ ಶಿವ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಅವರು ಉಪನ್ಯಾಸ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವಕೀಲರಾದ ಶಾರದಾ ಕವಲೂರ ಮಾತನಾಡುತ್ತಾ, ಕಾನೂನಿನ ಅಡಿಯಲ್ಲಿ ಇಂದು ಮಹಿಳೆಗೆ ಎಲ್ಲ ರೀತಿಯ ಭದ್ರತೆ, ರಕ್ಷಣೆ ಇದ್ದಾಗಲೂ ಸಹ ಸಂಪೂರ್ಣ ನ್ಯಾಯ ಸಿಗುತ್ತಿಲ್ಲ. ಹಾಗಾಗಿ ಮಹಿಳೆ ತನ್ನನ್ನು ತಾನು ಅರಿತುಕೊಳ್ಳುತ್ತಾ ನ್ಯಾಯಯುತವಾದ ನೈತಿಕ ಬದುಕನ್ನು ನಡೆಸುವ ಹೊಣೆಗಾರಿಕೆ ಹೊರಬೇಕು. ಜೊತೆಗೆ ಸಂವಿಧಾನಾತ್ಮಕ ಕಾನೂನಿನ ತಿಳುವಳಿಕೆ ಹೊಂದಿ ಸಮಾಜದ ಸರ್ವ ರಂಗಗಳಲ್ಲಿ ತನ್ನ ಅಭಿವೃದ್ಧಿಯನ್ನು ಕಾಣಬೇಕು ಎಂದರು. ಬಸವರಾಜ ಶರಣರು ಮಾತನಾಡುತ್ತಾ, ಅನಾದಿ ಕಾಲದಿಂದಲೂ ಮಹಿಳೆಯನ್ನು ಗೌರವಿಸುವ ಸಂಸ್ಕೃತಿ ನಮ್ಮದು. ಸಾಮಾಜಿಕ ಹಿನ್ನೆಲೆಯಲ್ಲಿ ಮಹಿಳೆಗೆ ಎಲ್ಲಿಯೂ ಸಹ ತೊಂದರೆಯಾಗದಂತೆ ನಡೆದುಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಬೇಕು ಎಂದರು. ಸಮಾಜದ ಹಿರಿಯರಾದ ಲೀಲಾ ಮುದರಡ್ಡಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಟ್ರಸ್ಟಿನ ಕಾರ್ಯದರ್ಶಿಗಳಾದ ಭಾಗ್ಯಶ್ರೀ ಶಿರೋಳ ಉಪಸ್ಥಿತರಿದ್ದರು. ರಾಜೇಶ್ವರಿ ಶಿರೋಳ್ ಅತಿಥಿಗಳನ್ನು ಪರಿಚಯಿಸಿದರು. ಉಪನ್ಯಾಸಕರಾದ ಸುಧಾ ಹುಚ್ಚಣ್ಣವರ ಕಾರ್ಯಕ್ರಮ ನಿರೂಪಿಸಿದರು. ಮಧು ಪಾಟೀಲ್ ಹಾಗೂ ಶೈಲಜಾ ಕವಲೂರ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಿದರು. ಕವಿತಾ ಕೊಣ್ಣೂರ ಹಾಗೂ ಶೀಲಾ ಮುದರಡ್ಡಿ ಪ್ರಾರ್ಥನೆ ಹಾಡಿದರು. ಕಾರ್ಯಕ್ರಮದಲ್ಲಿ ಅಕ್ಕಮ್ಮ ರಡ್ಡೇರ, ಪವಿತ್ರಾ ರಡ್ಡಿ, ಶೋಭಾ ಪಾಟೀಲ್, ಓದುಗೌಡರ, ಹಾಗೂ ಸಮಸ್ತ ರಡ್ಡಿ ಬಳಗದ ಮಹಿಳೆಯರು ಉಪಸ್ಥಿತರಿದ್ದರು.

# ಹೊಸ ಖಬರಸ್ಥಾನದ ಸ್ವಚ್ಛತಾ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಡಂಬಳ ನಾಕಾ ಬಳಿಯಹೊಸ ಖಬರಸ್ಥಾನದಲ್ಲಿ ಗುರುವಾರ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ವಕ್ಫ್ ಮಂಡಳಿಯ ಅಧ್ಯಕ್ಷ ಜಿ.ಎಂ. ದಂಡಿನ ಖಭರಸ್ಥಾನಕ್ಕೆ ಭೇಟಿ ನೀಡಿ ಸ್ವಚ್ಛತಾ ಕಾರ್ಯವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿ, ಡಾ. ಜಾಕಿರ್ ಹುಸೇನ್ ಕಾಲೋನಿಯ ಮುಸ್ಲಿಂ ಜಮಾತಿನವರು ಉತ್ತಮ ಕಾರ್ಯವನ್ನು ಮಾಡುತ್ತಿದ್ದಾರೆ ಎಂದರಲ್ಲದೆ, ಸದರಿ ಖಬರಸ್ಥಾನಕ್ಕೆ ಕಾಂಪೌಂಡ್ ಗೋಡೆ ಇಲ್ಲದಿರುವ ಕಾರಣ ಕಾಂಪೌಂಡ್ ಗೋಡೆಯನ್ನು ಅತಿ ಶೀಘ್ರದಲ್ಲಿ ವಕ್ಫ್ ಮಂಡಳಿಯಿಂದ ನಿರ್ಮಾಣ ಮಾಡಿಕೊಡಲಾಗುವುದೆಂದು ಹೇಳಿದರು.

ಜಮಾತಿನ ಚೇರಮನ್ ಶಾಬುದ್ದೀನ್ ಟೋಪಿವಾಲೆ ಮಾತನಾಡಿ, ಗದಗ-ಬೆಟಗೇರಿ ಮುಸ್ಲಿಂ ಸಮಾಜದ ಬಾಂಧವರು ಸಹ ಇಂತಹ ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿ ಸಹಕರಿಸಬೇಕೆಂದು ವಿನಂತಿಸಿಕೊಂಡರು.

ಸ್ವಚ್ಛತಾ ಕಾರ್ಯವು ಸಂಸ್ಥೆಯ ನಿರ್ದೇಶಕರಾದ ಎಂ.ಸಿ. ಶೇಖ, ಪ್ರೊ. ಎಂ.ಎಲ್. ಗುಳೇದಗುಡ್ಡ ಹಾಗೂ ಶಬ್ಬೀರ್ ಶಿರಹಟ್ಟಿ ಇವರುಗಳ ನೇತೃತ್ವದಲ್ಲಿ ನೆರವೇರಿತು. ಈ ಸಂರ್ಭದಲ್ಲಿ ಮುಸ್ಲಿಂ ಸಮಾಜದ ಗಣ್ಯರಾದ ಮುನ್ನಾ ರೇಷ್ಮೆ, ದೊಡ್ಡಮನಿ ಸೇರಿದಂತೆ ಗದಗ-ಬೆಟಗೇರಿ ಮುಸ್ಲಿಂ ಮುಖಂಡರು, ಸಮಾಜದ ಗಣ್ಯರುಗಳಿಗೆ ಧನ್ಯವಾದಗಳನ್ನು ಸಲ್ಲಿಸಲಾಯಿತು.

# ವಿಜ್ಞಾನ ಲೇಖನಗಳು ಮೂಢನಂಬಿಕೆಗಳನ್ನು ಕಳೆಯುತ್ತವೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿಜ್ಞಾನ ಎಂಬುದು ನಿಸರ್ಗದ ನಿಯಮಗಳು, ಘಟನಾವಳಿಗಳು ಮತ್ತು ತತ್ವಗಳನ್ನು ಅಧ್ಯಯನ ಮಾಡುವ ಶಿಸ್ತಿನ ಜ್ಞಾನವಾಗಿದೆ. ಇದು ವಸ್ತುನಿಷ್ಠ ಪರಿಶೀಲನೆ, ಪರೀಕ್ಷೆ ಮತ್ತು ವಿಶ್ಲೇಷಣೆಯ ಮೂಲಕ ನಂಬಲು ಸಾಧ್ಯವಾದ ಮಾಹಿತಿಯನ್ನು ಒದಗಿಸುತ್ತದೆ ಎಂದು ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗದ ಪ್ರಾಣಿಶಾಸ್ತ್ರ ವಸ್ತುಸಂಗ್ರಹಾಲಯದ ಟ್ಯಾಕ್ಸಿಡರ್ಮಿಸ್ಟ್ ನವೀನ ಪ್ಯಾಟಿಮನಿ ತಿಳಿಸಿದರು.



ಇಲ್ಲಿನ ಪ್ರಾದೇಶಿಕ ವಿಜ್ಞಾನ ಕೇಂದ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 'ವಿಜ್ಞಾನ ಲೇಖಕರ ಕಮ್ಮಟ' ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ವಿಜ್ಞಾನ ಲೇಖನಗಳು ಸಾಮಾನ್ಯ ಜನರಿಗೂ ಕೂಡ ಸ್ಪಷ್ಟ, ಸರಳವಾಗಿ ತಿಳಿಯುವಂತೆ ಮಾಡಿ ಅವರಲ್ಲಿ ವೈಜ್ಞಾನಿಕ ಮನೋಭಾವನೆ ಮೂಡಿಸಿ ಅವರ ತಲೆಯಲ್ಲಿರುವ ಮೂಢನಂಬಿಕೆಗಳನ್ನು ಹೋಗಲಾಡಿಸಲು ಮುಖ್ಯ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದ ನಿರ್ದೇಶಕ ಡಾ. ವೀರಣ್ಣ ಬೋಳಿಶೆಟ್ಟಿ, ಐ.ಐ.ಟಿ ಡೀನ್ ಪ್ರೊ. ಎಸ್.ಎಂ. ಶಿವಪ್ರಸಾದ, ಸುರೇಶ ಕುಲಕರ್ಣಿ, ಡಾ. ಅರವಿಂದ ಕುಲಕರ್ಣಿ, ಡಾ. ಶಿವಶಂಕರ ಪ್ರಸಾದ, ಡಾ. ಲಿಂಗರಾಜ ರಾಮಾಪುರ, ಸಿ.ಎಫ್. ಚಂಡೂರ, ವಿಶಾಲಾಕ್ಷಿ, ಬಿ.ಎಡ್ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# ರಂಜಾನ್ ಚಾರಿಟಿ ಫುಡ್ ಕಿಟ್ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ರಂಜಾನ್ ಹಬ್ಬವು ಮುಸ್ಲಿಂ ಬಾಂಧವರ ದೊಡ್ಡ ಹಬ್ಬಗಳಲ್ಲಿ ಒಂದಾಗಿದ್ದು, ಪವಿತ್ರ ರಂಜಾನ್‌ನಲ್ಲಿ ಒಂದು ತಿಂಗಳ ಉಪವಾಸ ಮಾಡುವದರಿಂದ ನಮ್ಮ ಸಂಬಂಧ ದೇವರ ಜೊತೆ ಮತ್ತಷ್ಟು ಗಟ್ಟಿಯಾಗುತ್ತದೆ. ರಂಜಾನ್ ಮಾಸದಲ್ಲಿ ಮುಸ್ಲಿಂ ಧರ್ಮದ ನಿಯಮಗಳನ್ನು ಶಿಸ್ತಿನಿಂದ ಪಾಲಿಸಿದರೆ ಪಾಪಗಳಿಂದ ಮೋಕ್ಷ ಸಿಗುತ್ತದೆ ಎಂದು ಡಾ. ಪ್ಯಾರಅಲಿ ನೂರಾನಿ ಅವರು ಹೇಳಿದರು.



ನಗರದ ಇರಾನಿ ಕಾಲೋನಿಯಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಆಹಾರ ಕಿಟ್ ವಿತರಣೆ ಮಾಡಿ ಅವರು ಮಾತನಾಡಿದರು.

ಖೋಜಾ ಜಮಾತ್ ನೇತೃತ್ವದಲ್ಲಿ 180ಕ್ಕೂ ಹೆಚ್ಚು ಕುಟುಂಬಗಳ ಸದಸ್ಯರು ರಂಜಾನ್ ಚಾರಿಟಿ ಫುಡ್ ಕಿಟ್‌ಗಳನ್ನು ಪಡೆದುಕೊಂಡರು.

ಈ ಸಂದರ್ಭದಲ್ಲಿ ಎಂ.ಸೈಯಾನಿ, ಆರಿಫ್ ಲಖಾನಿ, ರೆಹಾನ್ ಲಖಾನಿ, ಮೌಲಾನಾ ಅಮೀರ ಹುಸೇನ್ ಸಾಬ್, ಇರಾನಿ ಕಾಲೋನಿ ಮುಖ್ಯಸ್ಥರಾದ ಅಕ್ಬರ್‌ಅಲಿ ಸೇರಿದಂತೆ ಎಲ್ಲಾ ಸ್ಥಳೀಯ ಫಲಾನುಭವಿಗಳು, ಖೋಜಾ ಜಮಾತ್ ತಂಡದವರು ಉಪಸ್ಥಿತರಿದ್ದರು.

